ಸಂಪುಟ 01 | ಸಂಚಿಕೆ 01 | ಶನಿವಾರ 15 ನವೆಂಬನ್ 2025 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1)ರಾಷ್ಟ್ರೀಯ ಪತ್ರಿಕಾ ದಿನ (National Press Day)**

ಭಾರತದಲ್ಲಿ ಪ್ರತಿ ವರ್ಷ ನವೆಂಬರ್ 16 ರಂದು ಆಚರಿಸಲಾಗುತ್ತದೆ. ಈ ದಿನವನ್ನು 1966ರಲ್ಲಿ ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾ ಸ್ಥಾಪನೆಯ ನೆನಪಿಗಾಗಿ ಆಚರಿಸಲಾಗುತ್ತದೆ. ಪತ್ರಿಕಾ ಸ್ವಾತಂತ್ರ್ಯ, ನೈತಿಕ ಪತ್ರಿಕೋದ್ಯಮ ಮತ್ತು ನಿಷ್ಠಾವಂತ ವರದಿಗಾರಿಕೆಯ ಮಹತ್ವವನ್ನು ಈ ದಿನ ವಿಶೇಷವಾಗಿ ಒತ್ತಿ ಹೇಳಲಾಗುತ್ತದೆ....1966: ಭಾರತದಲ್ಲಿ ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾ ಸ್ಥಾಪಿಸಲ್ಪಟ್ಟಿತು.

**2. ಅಂತರರಾಷ್ಟ್ರೀಯ ಸಹಿಷ್ಣುತೆ ದಿನ (International Day for Tolerance)**

ಈ ದಿನವನ್ನು ವಿಶ್ವಸಂಸ್ಥೆಯು (UNESCO) ಪ್ರತಿ ವರ್ಷ ನವೆಂಬರ್ 16 ರಂದು ಆಚರಿಸುತ್ತದೆ.ಉದ್ದೇಶ: ಜನಾಂಗ, ಧರ್ಮ, ಭಾಷೆ, ಸಂಸ್ಕೃತಿ ಅಥವಾ ಅಭಿಪ್ರಾಯಗಳಲ್ಲಿ ವ್ಯತ್ಯಾಸವಿದ್ದರೂ ಸಹಿಷ್ಣುತೆ, ಪರಸ್ಪರ ಗೌರವ ಮತ್ತು ಶಾಂತಿ ಕಾಪಾಡುವ ಸಂದೇಶವನ್ನು ನೀಡುವುದು.ಇದು 1995ರಲ್ಲಿ ಯುನೆಸ್ಕೋ ಸಂಸ್ಥೆಯು ಸ್ಥಾಪಿಸಿದ ಮಹತ್ವದ ದಿನವಾಗಿದೆ.

**3. ವಿಶ್ವ ಪರಂಪರೆ ಒಪ್ಪಂದದ ಅಂಗೀಕಾರ ದಿನ (World Heritage Convention Adoption Day)**

ಯುನೆಸ್ಕೋ ಸಂಸ್ಥೆಯು 1972ರ ನವೆಂಬರ್ 16 ರಂದು "ವಿಶ್ವ ಪರಂಪರೆ ಸಂರಕ್ಷಣೆ" ಕುರಿತ ಅಂತರರಾಷ್ಟ್ರೀಯ ಒಪ್ಪಂದವನ್ನು ಅಂಗೀಕರಿಸಿತು. ಈ ಒಪ್ಪಂದದ ಮೂಲಕ ವಿಶ್ವದ ಸಾಂಸ್ಕೃತಿಕ ಹಾಗೂ ಪ್ರಕೃತಿ ಪರಂಪರೆ ಸ್ಥಳಗಳನ್ನು ಸಂರಕ್ಷಿಸಲು ಪ್ರಾರಂಭವಾಯಿತು.

## ಸುಭಾಷಿತ

ಜನ ನಿಮ್ಮ ಗುರಿಗಳನ್ನು ನೋಡಿ ನಗಬೇಕು. ಇಲ್ಲದಿದ್ದರೆ ನಿಮ್ಮ ಗುರಿಗಳು ತೀರಾ ಸಣ್ಣವು ಎಂದು ಅರ್ಥ ಮಾಡಿಕೊಳ್ಳಿ. ಆದ್ದರಿಂದ ಮೊದಲಿಗೆ ವಿಲಕ್ಷಣವಾಗಿ ಕಾಣುವ ಗುರಿಗಳನ್ನು ಇಟ್ಟುಕೊಂಡು ಅದರ ಸಾಕಾರಕ್ಕೆ ಶ್ರಮಿಸಿ. ನಂತರ ನೀವೇ ಒಂದು ದಂತಕತೆಯಾಗುತ್ತೀರಿ.

ಅಜೀಂ ಪ್ರೇಮ್‌ಜಿ ವಿಪ್ರೊ ಸಂಸ್ಥಾಪಕ

# ಮೇಕೆದಾಟು ಯೋಜನೆ; ತಮಿಳುನಾಡಿಗೆ ಹಿನ್ನಡೆ, ನಮಗೆ ಸಿಕ್ಕ ನ್ಯಾಯ: ಡಿ ಕೆ ಶಿವಕುಮಾರ್

**ಬೆಂಗಳೂರು: ಮೇಕೆದಾಟು ವಿರುದ್ಧದ ತಮಿಳುನಾಡು ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿರುವುದು, ನ್ಯಾಯ ಪೀಠದಿಂದ ನಮಗೆ ನ್ಯಾಯ ಸಿಕ್ಕಂತಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.**

ಮೇಕೆದಾಟು ಯೋಜನೆ ಡಿಪಿಆರ್ ವಿರೋಧಿಸಿ ತಮಿಳುನಾಡು ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಜಾಗೊಳಿಸಿದ್ದು, ಇದರಿಂದ ತಮಿಳುನಾಡಿಗೆ ಹಿನ್ನಡೆಯಾಗಿದೆಯಲ್ಲಾ ಎಂದು ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಡಿ ಕೆ ಶಿವಕುಮಾರ್ ಅವರು ಮಾತನಾಡಿ, ಈ ಬಗ್ಗೆ ಸಂಪೂರ್ಣ ಮಾಹಿತಿ ಸಿಕ್ಕ ನಂತರ ವಿವರವಾಗಿ ಮಾತನಾಡುತ್ತೇನೆ. ಇದು ಯಾವುದೇ ರೀತಿಯ ಹಿನ್ನಡೆಯಲ್ಲ. ಬದಲಿಗೆ ನ್ಯಾಯ ಪೀಠದಿಂದ ನ್ಯಾಯ ಸಿಕ್ಕಂತಾಗಿದೆ. ಮೇಕೆದಾಟು, 'ನಮ್ಮ ನೀರು, ನಮ್ಮ ಹಕ್ಕು' ಯೋಜನೆ. ನಾವು ತಮಿಳುನಾಡಿಗೆ ಯಾವುದೇ ರೀತಿಯಲ್ಲೂ ಅಡ್ಡಿ ಮಾಡುತ್ತಿಲ್ಲ.

ಈ ಯೋಜನೆಯಿಂದ ತಮಿಳುನಾಡಿಗೇ ಹೆಚ್ಚು ಲಾಭವಾಗಲಿದೆ. ರಾಜ್ಯದ ಜನರ ಪ್ರಾರ್ಥನೆ, ಜನರ ಕಷ್ಟಕ್ಕೆ ನ್ಯಾಯಾಲಯ ಸ್ಪಂದಿಸಿದೆ ಎಂದು ತಿಳಿಸಿದರು. ನ್ಯಾಯಾಲಯಗಳ ತೀರ್ಮಾನದಂತೆ ತಮಿಳುನಾಡು ತನ್ನ ಪಾಲಿನ ನೀರನ್ನು ಪಡೆಯಲಿದೆ. ಹೀಗಾಗಿ ನಾವು ಈ ಯೋಜನೆ ಮುಂದುವರಿಸಿಕೊಂಡು ಹೋಗುತ್ತೇವೆ. ಈ ಯೋಜನೆಯನ್ನು ನಮ್ಮ ನೆಲದಲ್ಲಿ, ನಮ್ಮ ಹಣದಲ್ಲಿ ಮಾಡಲಾಗುತ್ತಿದೆ. ನೀರಿನ ಕೊರತೆ ಉಂಟಾದಾಗ ತಮಿಳುನಾಡಿಗೆ ನೀರು ಹರಿಸಲು ಈ ಸಮತೋಲಿತ ಅಣೆಕಟ್ಟೆ ನೆರವಾಗಲಿದೆ. ಇದು ಬೆಂಗಳೂರಿಗರ ಗೆಲುವು. ತಮಿಳುನಾಡು ಸೇರಿದಂತೆ ಬೇರೆ ರಾಜ್ಯಗಳಿಂದ ಬರುವ ಜನರಿಗೂ ನೀರು ಒದಗಿಸಲಾಗುವುದು. ಈಗಲಾದರೂ ಯೋಜನೆಗೆ ಸಹಕಾರ ನೀಡಿ ಎಂದು ತಮಿಳುನಾಡಿಗೆ ಮನವಿ ಮಾಡುತ್ತೇನೆ.

ನಾವೆಲ್ಲರೂ ಮಾನವೀಯತೆ ದೃಷ್ಟಿಯಿಂದ ಒಟ್ಟಾಗಿ ಕೆಲಸ ಮಾಡೋಣ ಎಂದು ಕರೆ ನೀಡಿದರು. ನ್ಯಾಯಾಲಯವು ಇಂತಹ ವಿಚಾರದಲ್ಲಿ ಕೇಂದ್ರ ಜಲ ಆಯೋಗಕ್ಕೆ (ಸಿಡಬ್ಲ್ಯೂಸಿ)ಗೆ ಮಾರ್ಗದರ್ಶನ ನೀಡಲಿದ್ದು, ನ್ಯಾಯಾಲಯ ಈ ವಿಚಾರದಲ್ಲಿ ಮಧ್ಯಪ್ರವೇಶ ಮಾಡುವುದಿಲ್ಲ ಎಂದು ಹೇಳಿದೆ. ಸಿಡಬ್ಲ್ಯೂಸಿ ಈ ಯೋಜನೆಗೆ ಸಹಕಾರ ನೀಡುವುದೇ ಎಂದು ಮಾಧ್ಯಮದವರು ಕೇಳಿದಾಗ, "ಈ ಯೋಜನೆಗೆ ಅನುಮತಿ ನೀಡದೇ ಬೇರೆ ಆಯ್ಕೆ ಅವರ ಮುಂದೆ ಇಲ್ಲ. ಅವರು ನ್ಯಾಯ ಒದಗಿಸಿಕೊಡಲೇಬೇಕು ಎಂದು ತಿಳಿಸಿದರು. ಅಲ್ಲಿಯವರೆಗೆ ಸಿದ್ದರಾಮಯ್ಯ ಅವರೇ ಸಿಎಂ. ಈ ಮಾತನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಮನೆ ಮುಂದೆ ನಿಂತು ಹೇಳುತ್ತೇನೆ ಎಂಬ ಸಚಿವ ಜಮೀರ್ ಅಹ್ಮದ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಬಹಳ ಸಂತೋಷ. ಮುಖ್ಯಮಂತ್ರಿ ಇದ್ದಾರೆ, ಇರಲಿ. ಅದರಲ್ಲಿ ತಪ್ಪೇನಿದೆ.




ಕೇಂದ್ರ ಸಚಿವರ ಭೇಟಿ ಕುರಿತು ಮಾತನಾಡಿ, ಕಳೆದ ದೆಹಲಿ ಪ್ರವಾಸದಲ್ಲಿ ಕೇಂದ್ರ ಸಚಿವರನ್ನು ಭೇಟಿ ಮಾಡಿಲ್ಲ. ಈ ಬಾರಿ ಹೋದಾಗ ಭೇಟಿ ಮಾಡಬೇಕು. ನಾನು ನನ್ನದೇ ಆದ ಯೋಜನೆ ರೂಪಿಸುತ್ತಿದ್ದೇನೆ. ಮಹದಾಯಿ, ಎತ್ತಿನಹೊಳೆ ಯೋಜನೆ ವಿಚಾರವಾಗಿ ಅರಣ್ಯ ಇಲಾಖೆ ತಕರಾರು ಹಾಕಿಕೊಂಡು ಕೂತಿದ್ದಾರೆ. ಅಲ್ಲಿ ಮಣ್ಣು ತೆಗೆದು ರೆವೆನ್ಯೂ ಭೂಮಿಯಲ್ಲಿ ಪಕ್ಕಕ್ಕೆ ಹಾಕಿದ್ದೇವೆ. ಈಗ ಅದನ್ನು ಅರಣ್ಯ ಭೂಮಿ ಎಂದು ಹೇಳುತ್ತಿದ್ದಾರೆ. ಅರಣ್ಯಕ್ಕೆ ಪರ್ಯಾಯ ಭೂಮಿ ನೀಡಲು ಮುಂದಾಗಿದ್ದೇವೆ. ಅದಕ್ಕೂ ಅನುಮತಿ ನೀಡುತ್ತಿಲ್ಲ. ಇದರಿಂದ ಯೋಜನಾ ವೆಚ್ಚ ಎಷ್ಟು ಏರಿಕೆಯಾಗಲಿದೆ. ಅವರು ನಮಗೆ ಕೊಡುವ ಹಣ ನೀಡುತ್ತಿಲ್ಲ, ಯೋಜನೆಗಳಿಗೆ ಅನುಮತಿಯನ್ನೂ ನೀಡುತ್ತಿಲ್ಲ. ರಾಜ್ಯಕ್ಕೆ ಯಾವ ರೀತಿ ಅನ್ಯಾಯವಾಗುತ್ತಿದೆ ಎಂಬುದನ್ನು ನ.14ರಂದು ಮಾತನಾಡುತ್ತಿದ್ದೇನೆ ಎಂದು ತಿಳಿಸಿದರು.

# ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವಿಜಯಪುರಕ್ಕೆ ಅನೀರಿಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ ಡಾ.ಆನಂದ ಕೆ



❑ ನೈಜ್ಯ ದೆಸೆ ನ್ಯೂಸ್

ವಿಜಯಪುರ: ನ.13 (ಕರ್ನಾಟಕ ವಾರ್ತೆ) ಜಿಲ್ಲಾಧಿಕಾರಿಗಳಾದ ಡಾ.ಆನಂದ.ಕೆ. ಅವರು ನ.12ರಂದು ನಗರದ ಕೃಷಿ ಉತ್ಪನ್ನ ಮಾರುಕಟ್ಟೆಗೆ ಅನೀರಿಕ್ಷಿತ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಸಮಿತಿಯ ಮಾರುಕಟ್ಟೆ ಪ್ರಾಂಗಣದಲ್ಲಿ ನಡೆಯುವ ಕೃಷಿ ಉತ್ಪನ್ನಗಳ ವ್ಯಾಪಾರ ವಹಿವಾಟು ಪರಿಶೀಲನೆ ನಡೆಸಿದ ಅವರು, ಪ್ರಾಂಗಣದಲ್ಲಿ ನಡೆಯುತ್ತಿರುವ ಹತ್ತಿ ಉತ್ಪನ್ನದ ಆನ್‌ಲೈನ್ ಟ್ರೇಡಿಂಗ್ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ವ್ಯಾಪಾರಸ್ಥರ ಅಂಗಡಿಗಳಿಗೆ ಭೇಟಿ ನೀಡಿ ಅಲ್ಲಿದ್ದ ರೈತರೊಂದಿಗೆ ಸಮಾಲೋಚನೆ ನಡೆಸಿ, ಕೃಷಿ ಉತ್ಪನ್ನಗಳಿಗೆ ಯೋಗ್ಯ ದರಗಳು ದೊರೆಯುತ್ತಿರುವ ಕುರಿತಾಗಿ ತಿಳಿದುಕೊಂಡರು. ಕೃಷಿ ಉತ್ಪನ್ನ ಮಾರುಕಟ್ಟೆಯ ಪ್ರಾಂಗಣದಲ್ಲಿ ಸಮಿತಿಯ ವತಿಯಿಂದ ಒದಗಿಸಲಾಗಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಹತ್ತಿ ವ್ಯಾಪಾರ ವಹಿವಾಟಿನ ಸಂದರ್ಭ ಇರುವುದರಿಂದ ಸಮಿತಿ ವತಿಯಿಂದ ಸುರಕ್ಷೆಯ ದೃಷ್ಟಿಯಿಂದ ನಿಯೋಜಿಸಿರುವ ಅಗ್ನಿಶಾಮಕ ದಳದ ವಾಹನ ಹಾಗೂ ಇ-ಟೆಂಡರ್ ವ್ಯವಸ್ಥೆ ಪರಿಶೀಲಿಸಿ, ಈ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾರುಕಟ್ಟೆಯಲ್ಲಿ ಮೆಕ್ಕೆಜೋಳ ಉತ್ಪನ್ನದ ಕುರಿತಾಗಿ ಹಿರಿಯ ಅಧಿಕಾರಿಗಳೊಂದಿಗೆ ಜಿಲ್ಲಾ ಟಾಸ್ಕ ಪೋರ್ಸ ಸಮಿತಿ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರಾದ ಶಿವಾನಂದ ಪಿ ಗೋಠೆ, ಸಮಿತಿಯ ಕಾರ್ಯದರ್ಶಿಗಳಾದ ಅಲ್ಲಾಭಕ್ಷ ಬಿಜಾಪುರ ಇವರು ಹಾಜರಿದ್ದು ಸಮಿತಿ ಕಾರ್ಯ ಕಲಾಪಗಳ ಮಾಹಿತಿ ವಿವರ ನೀಡಿದರು. ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯದ ನಾಲ್ಕು ರೈಲು ನಿಲ್ದಾಣಗಳಿಗೆ ಸಂತರ ಹೆಸರಿಡಲು ಪ್ರಸ್ತಾವನೆ: ಶೀಘ್ರವೇ ಅನುಮೋದನೆ ನೀಡುವಂತೆ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ವಿಜಯಪುರ, ಬೆಳಗಾವಿ, ಬೀದರ್ ಮತ್ತು ಶಿವಮೊಗ್ಗ ರೈಲು ನಿಲ್ದಾಣಗಳಿಗೆ ಪ್ರಮುಖ ಸಂತರ ಹೆಸರಿಡಲು ಶಿಫಾರಸು ಮಾಡಲು ಸಚಿವ ಎಂ.ಬಿ ಪಾಟೀಲ್ ಪ್ರಸ್ತಾವನೆ ಸಲ್ಲಿಸಿದ್ದಾರೆ.**

ಗುರುವಾರ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಸ್ಥಳೀಯ ಸಾಂಸ್ಕೃತಿಕ ಮಹತ್ವಕ್ಕೆ ಅನುಗುಣವಾಗಿ ಮರುನಾಮಕರಣ ಮಾಡಲಾಗಿದೆ ಎಂದು ಪಾಟೀಲ್ ಹೇಳಿದ್ದಾರೆ. ಈ ಶಿಫಾರಸನ್ನು ಕೇಂದ್ರ ಗೃಹ ಸಚಿವಾಲಯಕ್ಕೆ ಕಳುಹಿಸಲಾಗಿದೆ ಎಂದು ಅವರು ಹೇಳಿದರು.



ವಿಜಯಪುರ ರೈಲು ನಿಲ್ದಾಣವನ್ನು ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ರೈಲು ನಿಲ್ದಾಣ, ಬೆಳಗಾವಿ ನಿಲ್ದಾಣವನ್ನು ಶ್ರೀ ಬಸವ ಮಹಾಸ್ವಾಮಿಜಿ ರೈಲು ನಿಲ್ದಾಣ, ಬೀದರ್ ನಿಲ್ದಾಣವನ್ನು ಚನ್ನಬಸವ ಪಟ್ಟದೇವರು ರೈಲು ನಿಲ್ದಾಣ ಮತ್ತು ಸೂರಗೊಂಡನಕೊಪ್ಪ ನಿಲ್ದಾಣವನ್ನು ಭಯಗಡ ರೈಲು ನಿಲ್ದಾಣ ಎಂದು ಮರುನಾಮಕರಣ ಮಾಡಬೇಕೆಂದು ಪಾಟೀಲ್ ತಮ್ಮ ಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ.

ಈ ನಾಲ್ಕು ನಿಲ್ದಾಣಗಳಿಗೆ ಪೂಜ್ಯ ಸಂತರ ಹೆಸರಿಡಲು ರಾಜ್ಯ ಸರ್ಕಾರ ಶಿಫಾರಸು ಮಾಡಿದೆ ಮತ್ತು ಇದಕ್ಕೆ ಕೇಂದ್ರ ಗೃಹ ಸಚಿವಾಲಯದ ಅನುಮೋದನೆ ಅಗತ್ಯವಿದೆ ಎಂದು ಅವರು ವಿವರಿಸಿದರು. ಅದರಂತೆ, ಮೂಲಸೌಕರ್ಯ ಇಲಾಖೆ ಅಧಿಕೃತ ಸಂವಹನವನ್ನು ಕಳುಹಿಸಿದೆ ಎಂದು ಸಚಿವರು ಹೇಳಿದರು. ಈ ನಾಲ್ಕು ರೈಲು ನಿಲ್ದಾಣಗಳು ನೈಋತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗದ ವ್ಯಾಪ್ತಿಗೆ ಬರುತ್ತವೆ. ಪ್ರಸ್ತಾಪಿಸಲಾದ ಸಂತರು ಕರ್ನಾಟಕದ ಈ ಪ್ರದೇಶಗಳಿಗೆ ಗಮನಾರ್ಹ ಕೊಡುಗೆ

## ಸ್ಫೋಟ ಸಂಭವಿಸಿ ಮೂರು ದಿನ; ಅಂಗಡಿ ಛಾವಣಿ ಮೇಲೆ ತುಂಡರಿಸಿದ್ದ ಕೈ ಪತ್ತೆ!

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಕೆಂಪು ಕೋಟೆ ಬಳಿ ಸಂಭವಿಸಿದ ಸ್ಫೋಟದಲ್ಲಿ 13 ಮಂದಿ ಸಾವಿಗೀಡಾಗಿದ್ದು, ಸಂತ್ರಸ್ತರ ದೇಹಗಳು ಛಿದ್ರಗೊಂಡಿವೆ. ಗುರುವಾರ ಬೆಳಿಗ್ಗೆ ಆ ಸ್ಥಳದಿಂದ ಸ್ವಲ್ಪವೇ ದೂರವಿರುವ ಅಂಗಡಿಯೊಂದರ ಛಾವಣಿ ಮೇಲೆ ಕತ್ತರಿಸಿದ ಕೈಯೊಂದು ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.**




ಸ್ಫೋಟದ ಸ್ಥಳದಿಂದ ಕೆಲವು ಮೀಟರ್ ದೂರದಲ್ಲಿ, ಜೈನ ದೇವಾಲಯದ ಹಿಂದಿರುವ ಅಂಗಡಿಯ ಛಾವಣಿ ಮೇಲೆ ಕೈ ಪತ್ತೆಯಾಗಿದೆ ಎಂದು ಅವರು ಹೇಳಿದರು. ಈ ಕೈ ಬಗ್ಗೆ ಮಾಹಿತಿ ಪಡೆದ ನಂತರ, ಪೊಲೀಸ್ ಸಿಬ್ಬಂದಿ ತಕ್ಷಣವೇ ಸ್ಥಳಕ್ಕೆ ತಲುಪಿ, ಆ ಪ್ರದೇಶವನ್ನು ಸುತ್ತುವರೆದು ಅದನ್ನು ಸಂಗ್ರಹಿಸಿದ್ದಾರೆ. ಸಂತ್ರಸ್ತರ ಗುರುತನ್ನು ಖಚಿತಪಡಿಸಿಕೊಳ್ಳಲು ಆ ಕೈಯನ್ನು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನವೆಂಬರ್ 10 ರಂದು ರಾಷ್ಟ್ರ ರಾಜಧಾನಿಯ ಕೆಂಪು ಕೋಟೆ ಬಳಿ ಸ್ಫೋಟಕಗಳಿಂದ ತುಂಬಿದ್ದ ಕಾರೊಂದು ಸ್ಫೋಟಗೊಂಡು 13 ಜನರು ಸಾವಿಗೀಡಾಗಿದ್ದರು

# ಪೋಷಕ-ಶಿಕ್ಷಕರ ಮಹಾಸಭೆಯನ್ನು ಅರ್ಥಪೂರ್ಣವಾಗಿ ಆಯೋಜಿಸಿ ಯಶಸ್ವಿಗೊಳಿಸಲು :ಜಿಪಂ ಸಿಇಓ ರಿಷಿ ಆನಂದ ಕರೆ

❑ ನೈಜ್ಯ ದೆಸೆ ನ್ಯೂಸ್

**ವಿಜಯಪುರ: ನ.13 (ಕರ್ನಾಟಕ ವಾರ್ತೆ) ಸರ್ಕಾರಿ ಶಾಲೆಗಳು ಮತ್ತು ಕಾಲೇಜಿನ ಎಲ್ಲಾ ಅರ್ಹ ವಯಸ್ಸಿನ ಮಕ್ಕಳಿಗೆ ಒಳಗೊಳ್ಳುವಿಕೆ, ಪ್ರವೇಶಾವಕಾಶ ಮತ್ತು ಸಮಾನತೆಯ ಮೂಲಕ ಶಿಕ್ಷಣವನ್ನು ಒದಗಿಸುತ್ತವೆ. ಸರ್ಕಾರಿ ಶಾಲಾ-ಕಾಲೇಜುಗಳು ಎಸ್.ಡಿ.ಎಂ.ಸಿ.,ಸಿ.ಡಿ.ಸಿ. ಮತ್ತು ಒಟ್ಟಾರೆ ಸಮುದಾಯದ ಹಿತಾಸಕ್ತಿಗಳ ಫಲಶೃತಿಯಾಗಿವೆ. ಈ ನಿಟ್ಟಿನಲ್ಲಿ ಎಲ್ಲಾ ಸರ್ಕಾರಿ ಶಾಲಾ-ಕಾಲೇಜುಗಳ ಎಲ್ಲಾ ಪ್ರಮುಖ ಪಾಲುದಾರರನ್ನು ತಲುಪಲು ನವೆಂಬರ್ 14ರಂದು ಮಕ್ಕಳ ದಿನಾಚಾರಣೆಯ ಪ್ರಯುಕ್ತ ರಾಜ್ಯಾದ್ಯಂತ ಏಕಕಾಲದಲ್ಲಿ 2025-26ನೇ ಸಾಲಿನ ಪೋಷಕ-ಶಿಕ್ಷಕರ ಮಹಾಸಭೆಯನ್ನು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಆಯೋಜಿಸಲಾಗಿದೆ.**

ಶಾಲಾ-ಕಾಲೇಜುಗಳಲ್ಲಿ ದಾಖಲಾತಿಯನ್ನು ಹೆಚ್ಚಿಸುವ ಮೂಲಕ ಸರ್ಕಾರಿ ಶಾಲಾ-ಕಾಲೇಜುಗಳ ಬಗ್ಗೆ, ಪೋಷಕರಲ್ಲಿ ಭರವಸೆಯನ್ನು ಹೆಚ್ಚಿಸುವ ಮಹತ್ತರವಾದ ಗುರಿಯೊಂದಿಗೆ ಈ ಸಭೆಯನ್ನು ಆಯೋಜಿಸಲಾಗಿದೆ. ಆದಕಾರಣ, ಪೋಷಕ-ಶಿಕ್ಷಕರ ಮಹಾಸಭೆಯನ್ನು ಅರ್ಥಪೂರ್ಣವಾಗಿ ಆಯೋಜಿಸಿ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಕರೆ ನೀಡಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಷ್ಟ್ರ ನಿರ್ಮಾಣ ಮತ್ತು ಚೈತನ್ಯಶೀಲ ಸಮಾಜ ನಿರ್ಮಾಣದ ಸಾಕಾರಕ್ಕಾಗಿ ಅರ್ಹ ವಯೋಮಾನದ ಎಲ್ಲಾ ಮಕ್ಕಳು ಶಾಲೆಗೆ ದಾಖಲಾಗಿ, ನಿರಂತರವಾಗಿ ಹಾಜರಾಗಿ ಗುಣಮಟ್ಟದ ಶಿಕ್ಷಣ ಪಡೆಯುವುದು ಅತ್ಯಗತ್ಯವಾಗಿರುತ್ತದೆ. ಮಕ್ಕಳ ಕಲಿಕೆಯು ಶಾಲೆ, ಮನೆ ಮತ್ತು ಸಮಾಜಗಳ ನಡುವೆ ನಿರಂತರ ಸಂಪರ್ಕವನ್ನು ಕಲ್ಪಿಸುತ್ತದೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪೋಷಕರ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಅವರನ್ನು ಈ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿರುತ್ತದೆ.

ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಪೂರಕವಾಗಿ ಸರ್ಕಾರದಿಂದ ಅನುಷ್ಠಾನಿಸಲಾಗಿರುವ ಉಪಕ್ರಮಗಳು, ಪೋಷಕರು, ಶಿಕ್ಷಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದ ವಾತಾವರಣ ನಿರ್ಮಿಸುವುದು ಪೋಷಕ ಶಿಕ್ಷಕ ಸಭೆಗಳ ಉದ್ದೇಶವಾಗಿದೆ. ಈಗಾಗಲೇ ಜಿಲ್ಲಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಪೋಷಕ ಶಿಕ್ಷಕರ ಮಹಾಸಭೆ ನಡೆಸುವ ಬಗ್ಗೆ, ಸೂಕ್ತ ಮಾರ್ಗದರ್ಶನ ಮಾಡಲಾಗಿದ್ದು, ಈಗಾಗಲೇ ಪ್ರತಿ ಸರಕಾರಿ ಶಾಲೆ-ಕಾಲೇಜುಗಳಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ.ಅಂದು ಶಿಕ್ಷಕರ ಜೊತೆಗೆ ಪಾಲಕರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸೂಕ್ತ ಮಾರ್ಗದರ್ಶನ ಮಾಡಲು ವಿನಂತಿಸಿದ್ದಾರೆ.



ಶಾಲಾ/ಕಾಲೇಜಿನ ಒಟ್ಟಾರೆ ದಾಖಲಾತಿಯು 80ಕ್ಕಿಂತ ಕಡಿಮೆ ಇದ್ದಲ್ಲಿ ಎಲ್ಲಾ ಪೋಷಕರನ್ನೂ ಮಹಾಸಭೆಗೆ ಆಹ್ವಾನಿಸುವುದು. 80ಕ್ಕಿಂತ ಹೆಚ್ಚು ದಾಖಲಾತಿ ಹೊಂದಿರುವ ಶಾಲಾ/ಕಾಲೇಜುಗಳಲ್ಲಿ ಸ್ಥಳಾವಕಾಶದ ಲಭ್ಯತೆಯನ್ನಾಧರಿಸಿ ಪಾಲಕರನ್ನು ಸಭೆಗೆ ಆಹ್ವಾನಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಅದರ ಜೊತೆಗೆ ಕಲಿಕೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಮತ್ತು ಸಹಪಠ್ಯ ಚಟುವಟಿಕೆಗಳಲ್ಲಿ ವಿಶೇಷ ಸಾಧನೆ ಮಾಡಿರುವ ವಿದ್ಯಾರ್ಥಿಗಳನ್ನು ಗುರುತಿಸಿ,ಸಭೆಯಲ್ಲಿ ಅಭಿನಂದಿಸುವುದು. ಜೊತೆಗೆ ಅಂದು ಶಾಲೆಯನ್ನು ತಳಿರು ತೋರಣಗಳಿಂದ ಅಲಂಕರಿಸಿ ಪಾಲಕರನ್ನು ಆಕರ್ಷಣೆ ಮಾಡಲು, ಸಭೆಯ ಸಂದರ್ಭದಲ್ಲಿ ಮಕ್ಕಳ ಸುರಕ್ಷತೆ ಮತ್ತು ಭದ್ರತೆಗೆ ಆದ್ಯತೆ ನೀಡುವುದು. ಶಾಲೆಗೆ ಬರುವ ಪಾಲಕರನ್ನು ಆತ್ಮೀಯವಾಗಿ ಬರಮಾಡಿಕೊಂಡು ಅವರಿಗೆ ಯಾವದೇ ರೀತಿಯ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಲು ಅವರು ಸಂಬಂದಿಸಿದ ಅಧಿಕಾರಿಗಳಿಗೆ ತಿಳಿಸಿರುತ್ತಾರೆ.

ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ಪರೀಕ್ಷಾ ಸಿದ್ಧತೆಗೆ ಅನುಕೂಲಿಸಲು ಇಲಾಖೆಯಿಂದ ನೀಡಲಾಗಿರುವ ಅಧ್ಯಾಯವಾರು-ವಿಷಯವಾರು ನೀಲನಕ್ಷೆ ಪ್ರಶ್ನೆ ಕೋರಿ ಮಾದರಿ ಪ್ರಶ್ನೆಪತ್ರಿಕೆಗಳು, ಮೌಲ್ಯಮಾಪನ ವಿಧಾನ ನಡೆಸಲಾಗುತ್ತಿರುವ ಎರಡು ಪೂರ್ವ ಸಿದ್ಧತಾ ಪರೀಕ್ಷೆಗಳು, ಎರಡು ಅಂತಿಮ ಪರೀಕ್ಷೆಗಳನ್ನು ನಡೆಸುತ್ತಿರುವ ಬಗ್ಗೆ, ಪೋಷಕರಿಗೆ ಮಾಹಿತಿ ನೀಡುವುದು, ವಿದ್ಯಾರ್ಥಿಗಳಲ್ಲಿ ಪರೀಕ್ಷಾ ಭಯ ಮತ್ತು ಆತಂಕ ನಿವಾರಣೆ ಏಕಾಗ್ರತೆ ಮಾನಸಿಕ ಒತ್ತಡ ನಿರ್ವಹಣೆಗಳ ಬಗ್ಗೆ ತಜ್ಞರಿಂದ ಸಂವಾದ-ಪ್ರೇರಣಾ ಕಾರ್ಯಕ್ರಮಗಳನ್ನು ಇಲಾಖೆಯಿಂದ ಆಯೋಜಿಸುತ್ತಿರುವ ಬಗ್ಗೆ ಪೋಷಕರಿಗೆ ತಿಳಿಸುವುದು ಮತ್ತು ವಿದ್ಯಾರ್ಥಿಗಳಿಗೆ ಪ್ರೋತ್ಸಾಹದಾಯಕ ಮಾತುಗಳನ್ನು ಹೇಳುವುದು. ಜೊತೆಗೆ ಶಾಲಾ-ಕಾಲೇಜುಗಳಲ್ಲಿ ಮಕ್ಕಳ ಕಲಿಕೆ ಉತ್ತಮಪಡಿಸಲು ಇಲಾಖೆಯಿಂದ ಹಮ್ಮಿಕೊಂಡಿರುವ ಕಲಿಕಾ ಉಪಕ್ರಮಗಳ ಬಗ್ಗೆ ಪೋಷಕರಿಗೆ ಮಾಹಿತಿ ನೀಡುವುದು. ಶಾಲಾ-ಕಾಲೇಜುಗಳಲ್ಲಿ ಲಭ್ಯಗೊಳಿಸಿರುವ ಭೌತಿಕ ಸೌಕರ್ಯಗಳು ಮತ್ತು ಶೈಕ್ಷಣಿಕ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡುವುದು.

ಹೆಚ್ಚು ದಾಖಲಾತಿ ಹೊಂದಿರುವ ಸರ್ಕಾರಿ ಶಾಲಾ-ಕಾಲೇಜುಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಿ ಹೆಚ್ಚುವರಿ ಅನುದಾನ ನೀಡಿ ಅಭಿವೃದ್ಧಿಪಡಿಸುತ್ತಿರುವ ಬಗ್ಗೆ ಹಾಗೂ ಅಜೀಂ ಪ್ರೇಮ್ ಜಿ ಫೌಂಡೇಷನ್ ಸಹಯೋಗದೊಂದಿಗೆ ವಾರಕ್ಕೆ 06 ದಿನಗಳು ಮೊಟ್ಟೆ/ಬಾಳೆಹಣ್ಣು ಮತ್ತು ಶ್ರೀ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್ ಸಹಯೋಗದೊಂದಿಗೆ ವಾರಕ್ಕೆ 05 ದಿನಗಳು ಸಾಯಿ ಶೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಹಾಲಿನೊಂದಿಗೆ ಮಿಶ್ರಣ ಮಾಡಿ ನೀಡುತ್ತಿರುವ ಕುರಿತಾಗಿಯೂ ಪೋಷಕರಿಗೆ ಮಾಹಿತಿ ನೀಡುವುದು. ಮಕ್ಕಳ ಹಕ್ಕುಗಳು, ಆರ್.ಟಿ.ಇ. ಕಾಯ್ದೆ, ವಿಶೇಷ ಅಗತ್ಯತೆಯುಳ್ಳ ಮಕ್ಕಳ ಶಿಕ್ಷಣ, ಮಕ್ಕಳ ರಕ್ಷಣಾ ನೀತಿ ಮತ್ತು ಪೋಕ್ಸೋ ಕಾಯ್ದೆ ಕುರಿತು ಪೋಷಕರಲ್ಲಿ ಅರಿವು ಮೂಡಿಸುವುದು.

ಮಕ್ಕಳು ಶಾಲೆಯಿಂದ ಹೊರಗುಳಿಯುವ ಹಾಗೂ ಗೈರುಹಾಜರಾಗುವ ಕುರಿತಾಗಿ, ಬಾಲ ಕಾರ್ಮಿಕರು ಮತ್ತು ಬಾಲ್ಯ ವಿವಾಹಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೋಷಕರ ಜವಾಬ್ದಾರಿಗಳ ಕುರಿತಾಗಿ ಅರಿವು ಮೂಡಿಸುವುದು. ಪೋಷಕರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಆಗತ್ಯತೆಗನುಸಾರವಾಗಿ ಶಾಲಾಭಿವೃದ್ಧಿ ಹಾಗೂ ಶಾಲಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಬಗ್ಗೆ ಚರ್ಚಿಸುವುದು. ಒಟ್ಟಾರೆಯಾಗಿ ಈ ಮಹಾಸಭೆಯು ಸರಕಾರಿ ಶಾಲೆಗಳ ಮತ್ತು ಮಕ್ಕಳ ಸಮಗ್ರ ಅಭಿವೃದ್ಧಿಯ ದೃಷ್ಟಿಕೋನದಿಂದ ಅತ್ಯಂತ ಮಹತ್ವದ್ದಾಗಿದ್ದು, ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ

## ಸಾಹಿತ್ಯ ಸಿಂಚನ

ದಿಕ್ಕು ದಿಕ್ಕು ದೆಸೆಯಲ್ಲಿ ಹರಡುವೆ ನಾ..
ಸಮಾಜದಲ್ಲಿ ಹಿತವನ್ನು ಬಯಸುವೆ
ನ್ಯಾಯವನ್ನು ದೊರಕಿಸುವೆ
ದಿಕ್ಕು ದಿಕ್ಕು ದೆಸೆಯಲ್ಲಿ ಹರಡುವೆ ನಾ....

ಒಗ್ಗಟ್ಟಿನ ಹಾದಿಯ ತೋರಿಸುವೆ ನಾ...
ಜಾತಿ ಭೇದವ ಕೊಲ್ಲುವೆ
ಒಂದು ಹೆಸರಿನ ಹಾದಿಯಲ್ಲಿ
ನೈಜದ ಅನೇಕ ರೂಪವ ಬಲ್ಲವ
ದಿಕ್ಕು ದಿಕ್ಕು ದೆಸೆಯಲ್ಲಿ ಹರಡುವೇ ನಾ....

ಮಕ್ಕಳಿಗೆ ಮನರಂಜನೆಯಾಗಿ
ಯುವಕರಿಗೆ ಪ್ರೇರಣೆಯಾಗುವೆ ನಾ
ನೈಜತೆಯನ್ನು ಕಾಪಾಡುವೆನು
ದಿಕ್ಕು ದಿಕ್ಕು ದೆಸೆಯಲ್ಲಿ ಹರಡುವೆ ನಾ...
ನೈಜದ ದೆಸೆಯಲ್ಲಿ ಪ್ರಯಾಣ ಮಾಡ ಬಯಸುವೆ ನಾ...

ನೈಜದ ದೆಸೆಯಲ್ಲಿ ನನ್ನ ಪ್ರೇರಣೆಯಾಗಿರಿ
ಸತ್ಯದ ಹಾದಿಯಲ್ಲಿ ಕೈಜೋಡಿಸಿ
ಹನಿ ಹನಿ ಸೇರಿ ಹಳ್ಳ ವಾಗುವುದು
ಒಗ್ಗಟ್ಟಿನಲ್ಲಿ ಪಸರಿಸುವೆ ನಾ...
ದಿಕ್ಕು ದಿಕ್ಕು ದೆಸೆಯಲ್ಲಿ ಹರಡುವೆ ನಾ....

ಈ ನಿಮ್ಮ ಪತ್ರಿಕೋದ್ಯಮದಲ್ಲಿ ಶುಭವಾಗಲಿ, ಜಯವಾಗಲಿ, ಬಲವಾಗಲಿ....
ದಿಕ್ಕು ದಿಕ್ಕು ದೆಸೆಯಲ್ಲಿ ಹರಡಲಿ...
ನೈಜ್ಯ ದಸೆ ಕನ್ನಡ
ದಿನಪತ್ರಿಕೆಗೆ ಶುಭವಾಗಲಿ...

ಯಾಸೀನಾ ಇರ್ಫಾನ್ ಸಿಂಧನೂರು

# ಓದುವ ಸಂಸ್ಕೃತಿ ನಶಿಸುತ್ತಿದ್ದು ನೋಡುವ ಸಂಸ್ಕೃತಿ ಹೆಚ್ಚಾಗಿದೆ: ಕೆ.ವಿ. ಪ್ರಭಾಕರ್ ಬೇಸರ

❑ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ಸರ್ವ ಜನಾಂಗದ ಶಾಂತಿಯ ತೋಟ ಎನ್ನುವುದೇ ಕನ್ನಡ ಮಣ್ಣಿನ ಮೌಲ್ಯ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಅಭಿಪ್ರಾಯಪಟ್ಟರು. ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ಮತ್ತು ಕೆ.ಎಂ. ಎಫ್ ಕಲಾವೇದಿಕೆ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.**

ಸಾಮಾಜಿಕ ನ್ಯಾಯದ ನೆಲೆಯಲ್ಲಿ ಕರ್ನಾಟಕ ಏಕೀಕರಣ ಆಗಿದೆ. ಎಲ್ಲ ಕನ್ನಡ ಮಾತನಾಡುವ ಪ್ರದೇಶಗಳ ಜನರ ಅಭಿವೃದ್ಧಿ ಮತ್ತು ದಮನಿತ ಸಮುದಾಯಗಳ ಏಳಿಗೆಯ ಆಶಯ ಕರ್ನಾಟಕ ರಾಜ್ಯ ಉದಯದ ಹಿಂದಿನ ಪ್ರಮುಖ ಆಶಯವಾಗಿತ್ತು. "ಕುವೆಂಪು ಅವರ ಸರ್ವ ಜನಾಂಗದ ಶಾಂತಿಯ ತೋಟ'ದ ಕಲ್ಪನೆ ರೂಪುಗೊಂಡಿದ್ದು ಹೀಗೆಯೇ. ಅವರ 'ಸರ್ವ ಜನಾಂಗದ ಶಾಂತಿಯ ತೋಟ' ಎನ್ನುವ ಮಾತು ಕನ್ನಡ ಸಂಸ್ಕೃತಿಯ ಮೌಲ್ಯವಾಗಿದ್ದು, ಅದನ್ನು ಸಾಧಿಸುವಲ್ಲಿ ನಾವು ಎಷ್ಟು ಯಶಸ್ವಿಯಾಗಿದ್ದೇವೆ ಎಂಬುದರ ಕುರಿತು ಅವಲೋಕಿಸಬೇಕಿದೆ ಎಂದರು. ಕೇವಲ ಭೌಗೋಳಿಕ ಗಡಿಗಳನ್ನು ಒಂದುಗೂಡಿಸುವುದಲ್ಲ, ಬದಲಿಗೆ ಕನ್ನಡ ಸಂಸ್ಕೃತಿಯ ಹಾಗೂ ಕನ್ನಡಿಗರ ಸಾಮಾಜಿ-ಕ-ಆರ್ಥಿಕ ಸಮಾನತೆಯ ಕನಸಾಗಿತ್ತು. ಭಾಷೆ ಬಳಸುವುದರಿಂದ ಬೆಳೆಯುತ್ತದೆ. ಆದರೆ, ಈಗ ತಂತ್ರಜ್ಞಾನದ ಓಟದಲ್ಲಿ ನಮ್ಮಲ್ಲಿ ಓದುವ ಸಂಸ್ಕೃತಿ ಕ್ಷೀಣಿಸುತ್ತಾ ಕೇವಲ ನೋಡುವ ಸಂಸ್ಕೃತಿ ಬೆಳೆಯುತ್ತಿರುವುದು ಬೇಸರದ ಸಂಗತಿ ಎಂದರು.

ಈ ರಾಜ್ಯೋತ್ಸವ ಆಯೋಜಿಸಿರುವ ಏಒಈ ಕನ್ನಡ ನಾಡಿನ ಹೆಮ್ಮೆಯ ಸ್ವಾಭಿಮಾನಿ ಸಂಸ್ಥೆಯಾಗಿದೆ. ನಮ್ಮ ಭಾಷಾಪ್ರೇಮ ಕೂಡ KMF ಹಾಲು-ತುಪ್ಪದಷ್ಟೇ ಶುಭ್ರವಾಗಿರಲಿ ಎಂದು ಆಶಿಸುತ್ತೇನೆ. ಹೀಗಾಗಿ ರಾಜ್ಯೋತ್ಸವ ನವೆಂಬರ್ 1 ರ ಒಂದು ದಿನದ ಸಂಭ್ರಮಕ್ಕೆ ಮಾತ್ರ ಸೀಮಿತವಾಗದೆ, ಕನ್ನಡ ಭಾಷೆ ಮತ್ತು ಪರಂಪರೆಯ ಮೌಲ್ಯವನ್ನು ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳುವ ಕರ್ತವ್ಯವಾಗಬೇಕಿದೆ. ಸ್ವಾಭಿಮಾನಿ ಕರ್ನಾಟಕದ ನಿರ್ಮಾಣದಲ್ಲಿ ನಾಡಿನ ಪ್ರತಿಯೊಬ್ಬರೂ ಸರ್ಕಾರವನ್ನು ಅವಲಂಬಿಸದೆ, ಪ್ರತಿಯೊಬ್ಬ ಕನ್ನಡಿಗನೂ ಕನ್ನಡದ ರಕ್ಷಣೆಗೆ, ಬೆಳವಣಿಗೆಗೆ ಸಕ್ರಿಯವಾಗಿ ಪಾಲ್ಗೊಳ್ಳಬೇಕು.

ಕರ್ನಾಟಕದಲ್ಲಿ ಕನ್ನಡಿಗರೇ ಸಾರ್ವಭೌಮರು. ಅದೇ ರೀತಿ ಹಾಲು ಸಂಗ್ರಹ ಮತ್ತು ಮಾರಾಟದಲ್ಲಿ ವಿಷಯದಲ್ಲಿ ಕನ್ನಡಿಗರೇ ಹುಟ್ಟುಹಾಕಿದ ಕೆಎಂಎಫ್‌ನ ಅಸ್ಮಿತೆ ದೊಡ್ಡದು. 1974ರಲ್ಲಿ ವಿಶ್ವ ಬ್ಯಾಂಕ್ ನೆರವಿನಿಂದ ಕರ್ನಾಟಕ ಡೈರಿ ಅಭಿವೃದ್ಧಿ ನಿಗಮ (KDDC) ಆಗಿ ಕೆಎಂಎಫ್ ಅನ್ನು ಸ್ಥಾಪಿಸಲಾಯಿತು. ಕರ್ನಾಟಕ ಏಕೀಕರಣಗೊಂಡು ಇಪ್ಪತ್ತು ವರ್ಷಗಳ ನಂತರ ಕೆಎಂಎಫ್ ಅಸ್ತಿತ್ವಕ್ಕೆ ಬಂತು. ಹಾಲು ಸಂಗ್ರಹ ಮತ್ತು ಮಾರಾಟದ ವಿಷಯದಲ್ಲಿ ಕೆಎಂಎಫ್ ಅಗ್ರಸ್ಥಾನದಲ್ಲಿದೆ ಮತ್ತು ನಾಡಿನ ಸ್ವಾಭಿಮಾನಿ ಮತ್ತು ಸ್ವಾವಲಂಭನೆ ಸಾಧಿಸಿರುವ ಸಂಸ್ಥೆಯಾಗಿದೆ. ದೇಶದಲ್ಲಿ ಎರಡನೇ ದೊಡ್ಡ ಹಾಲು ಸಹಕಾರಿ ಸಂಸ್ಥೆ ಎಂಬ ಖ್ಯಾತಿಗೂ ಒಳಗಾಗಿದೆ. ಹಾಲು ಸಂಗ್ರಹ ಹಾಗೂ ಪೂರೈಕೆ ವಿಚಾರದಲ್ಲಿ ದೇಶವೇ ಕರ್ನಾಟಕದತ್ತ ನೋಡುವಂತೆ ಮಾಡಿರುವ ಸಂಸ್ಥೆ ಎನ್ನಲು ಹೆಮ್ಮೆಯಾಗುತ್ತದೆ.

ನಿತ್ಯದ ಅಗತ್ಯಗಳಲ್ಲಿ ಹಾಲು ಎಷ್ಟು ಮುಖ್ಯವೋ ಹಾಗೆಯೇ ಏನೇ ಮುಂದುವ-ರಿದರೂ ಮಾತೃಭಾಷೆಯೆಂಬುದು ಅಷ್ಟೇ ಮುಖ್ಯ. ಭಾಷೆ ಹಾಗೂ ಭಾವ ಕಲುಷಿತಗೊಳ್ಳುತ್ತಿರುವ ಹೊತ್ತಿನಲ್ಲಿ ಭಾಷಾಪ್ರೇಮವನ್ನು ಹಾಲಿನಂತೆ ಶುಭ್ರವಾಗಿ ಇಟ್ಟುಕೊಳ್ಳುವುದರ ಅಗತ್ಯವಿದೆ ಎಂದು ಕರೆ ನೀಡಿದರು. ಮಹಾಮಂಡಳದ ಎಂಡಿ ಶಿವಸ್ವಾಮಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಚಲನಚಿತ್ರ ನಟರಾದ ರಮೇಶ್ ಭಟ್, ನಟಿ ಪದ್ಮಾವಾಸಂತಿ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

# ನವೆಂಬರ್ 14 ರಂದು ಮಕ್ಕಳ ದಿನಾಚರಣೆ ಅಂಗವಾಗಿ ವಿವಿಧ ಕಾರ್ಯಕ್ರಮಗಳ ಆಯೋಜನೆ



❑ ನೈಜ್ಯ ದೆಸೆ ನ್ಯೂಸ್

**ಕಲಬುರಗಿ: ಜಿಲ್ಲಾ ವಿಜ್ಞಾನ ಕೇಂದ್ರದ ವತಿಯಿಂದ ಮಕ್ಕಳ ದಿನಾಚರಣೆ ಅಂಗವಾಗಿ ಇದೇ ನವೆಂಬರ್ 14 ರಂದು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಪ್ರಾಥಮಿಕ ಶಾಲಾ ಮಕ್ಕಳಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ವಿಜ್ಞಾನ ಅಧಿಕಾರಿಗಳು ತಿಳಿಸಿದ್ದಾರೆ.**

ನವೆಂಬರ್ 14 ರಂದು ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ (3 ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ) ಮಕ್ಕಳ ಹಾಡುಗಾರಿಕೆ, ನೃತ್ಯ, ಕಥೆ ಹೇಳುವಿಕೆ, ಕಲೆ ಮತ್ತು ಕರಕುಶಲ ಪ್ರದರ್ಶನ, ಮ್ಯಾಜಿಕ್ ಟ್ರಿಕ್ಸ್‌ಗಳು, ಸೈನ್ಸ್ ಡೆಮೊ, ವಾದ್ಯ ಪ್ರದರ್ಶನ ಇತ್ಯಾದಿ ಯಾವುದೇ ಆಸಕ್ತಿಯ ಕ್ಷೇತ್ರದಲ್ಲಿ ಪ್ರದರ್ಶನ ನೀಡಬಹುದು. ಆಸಕ್ತಿಯುಳ್ಳ ವಿದ್ಯಾರ್ಥಿಗಳು ಮುಂಚಿತವಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಭಾಗವಹಿಸುವ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಗುತ್ತದೆ.

ಅಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12 ಗಂಟೆಗೆ (3 ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ) "ಮೂಲ ವಿಜ್ಞಾನ ಮತ್ತು ವರ್ಣರಂಜಿತ ಪ್ರಯೋಗಗಳು" (Basic science & colorful Experiments) ಕುರಿತು ಪ್ರಾತ್ಯಕ್ಷಿಕೆ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ (1 ರಿಂದ 5 ನೇ ತರಗತಿ) ಫ್ಯಾನ್ಸಿ ಡ್ರೆಸ್ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ನಂತರ ಮಧ್ಯಾಹ್ನ 1 ಗಂಟೆಗೆ ಸಮಾರೋಪ ಸಮಾರಂಭ ಹಾಗೂ ಬಹುಮಾನ ವಿತರಣಾ ಸಮಾರಂಭ ಜರುಗಲಿದೆ.

ವಿದ್ಯಾರ್ಥಿಗಳ ಪಟ್ಟಿಯನ್ನು ಇ-ಮೇಲ್ dscgeducation@gmail.com ಮೂಲಕ ಅಥವಾ ನೇರವಾಗಿ ಅಥವಾ ವಾಟ್ಸ್ ಆಪ್ (Whats App) ಮೂಲಕ ಕಳುಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08472-270608 ಅಥವಾ 9788078048/ 9447541616 ಗೆ ವಾಟ್ಸ್‌ಆಫ್ ಮೂಲಕ ಸಂಪರ್ಕಿಸಲು ಕೋರಲಾಗಿದೆ.

## ಒಂದೇ ಕಟ್ಟಡದಲ್ಲಿ ಶಾಲಾ ತರಗತಿ ಮತ್ತು ಗ್ರಾಮ ಪಂಚಾಯತ್ ಕಚೇರಿ; ವಿದ್ಯಾರ್ಥಿಗಳ ಭವಿಷ್ಯ ಅತಂತ್ರ!

❑ ನೈಜ್ಯ ದೆಸೆ ನ್ಯೂಸ್

**ಗದಗ: ಬಹುಶಃ ಇದು ಹೊಸ ಶಿಕ್ಷಣ ನೀತಿಯಾಗಿರುವಂತೆ ಕಾಣುತ್ತದೆ. ಏಕೆಂದರೆ ಗದಗ ಜಿಲ್ಲೆಯ ಕಣಗಿನಹಾಳ ಎಂಬ ಹಳ್ಳಿಯಲ್ಲಿ, ಸ್ಥಳೀಯ ಸರ್ಕಾರಿ ಶಾಲೆಯ ಸುಮಾರು 82 ವಿದ್ಯಾರ್ಥಿಗಳು ಕ್ಲಾಸ್ 1 ರಿಂದ 5 ನೇ ತರಗತಿಯವರೆಗೆ ಪ್ರತಿದಿನ ಸಾಮಾನ್ಯ ಆಡಳಿತದ ಪಾಠಗಳನ್ನು ಕಲಿಯುತ್ತಿದ್ದಾರೆ.**



ವಿದ್ಯಾರ್ಥಿಗಳು ಸ್ವತಃ ಎರಡು ಸಣ್ಣ ಕೊಠಡಿಗಳಲ್ಲಿ ಒಟ್ಟಿಗೆ ಸೇರಿದ್ದಾರೆ, ಕಟ್ಟಡದಲ್ಲಿ ಗ್ರಾಮ ಪಂಚಾಯತ್ ಕಚೇರಿ ಕೂಡ ಇದೆ. ಪ್ರತ್ಯೇಕ ವ್ಯವಸ್ಥೆ ಮಾಡುವಂತೆ ಹಲವು ಮನವಿಗಳನ್ನು ಮಾಡಲಾಗಿದೆ, ಆದರೆ ಅಧಿಕಾ-ರಿಗಳು ಇನ್ನೂ ಈ ಕಡೆ ಗಮನ ಹರಿಸಲಿಲ್ಲ. ಹೀಗಾಗಿ ವಿದ್ಯಾರ್ಥಿಗಳ ದುಃಸ್ಥಿತಿ ಇನ್ನೂ ಕೊನೆಗೊಂಡಿಲ್ಲ. ಶಾಲೆಯಲ್ಲಿ ಕೇವಲ ಎರಡು ಉತ್ತಮ ಕೊಠಡಿಗಳಿವೆ. ಒಂದು ತರಗತಿಯಲ್ಲಿ 1, 2 ಮತ್ತು 3 ನೇ ತರಗತಿಯ ವಿದ್ಯಾರ್ಥಿಗಳು ನಿಜವಾದ ಪ್ರಜಾಪ್ರಭುತ್ವ ಮನೋಭಾವದಿಂದ ಒಟ್ಟಿಗೆ ಕುಳಿತು ಪಾಠ ಕೇಳುತ್ತಾರೆ. ಇನ್ನೊಂದು ಕೋಣೆಯಲ್ಲಿ, 4, 5 ನೇ ತರಗತಿಯ ವಿದ್ಯಾರ್ಥಿಗಳು ಒಟ್ಟುಗೂಡಿ ಕುಳಿತುಕೊಳ್ಳುತ್ತಾರೆ. ಇದರ ಜೊತೆಗೆ ಗ್ರಾಮಸ್ಥರು ತಮ್ಮ ದೈನಂದಿನ ಕೆಲಸ ಕಾರ್ಯಗಳಗಾಗಿ ಪಂಚಾಯತ್ ಕಚೇರಿಗೆ ಬರುತ್ತಾರೆ. ಜಾತಿ ಪ್ರಮಾಣಪತ್ರ ಪಡೆಯುವುದು, ಫಾರ್ಮ್ ಭರ್ತಿ ಮಾಡುವುದು ಮತ್ತು ಅಂತಹ ಹಲವಾರು ಅಗತ್ಯಗಳು ಅವರಿಗಿರುತ್ತವೆ. ಶಿಥಿಲಾವಸ್ಥೆಯಲ್ಲಿ ಸರ್ಕಾರಿ ಶಾಲೆ; ಮೇಲ್ಛಾವಣಿ ಬೀಳುವ ಆತಂಕ: ತೆರೆದ ಜಾಗದಲ್ಲಿ ಮಕ್ಕಳಿಗೆ ಪಾಠ-ಪ್ರವಚನ! ಪೋಷಕರು ಗ್ರಾಮ ಪಂಚಾಯಿತಿ ಕಚೇರಿಯನ್ನು ಸ್ಥಳಾಂತ-ರಿಸಲು ಮತ್ತು ಶಿಥಿಲಗೊಂಡ ತರಗತಿ ಕೊಠಡಿಗಳನ್ನು ದುರಸ್ತಿ ಮಾಡುವಂತೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ಗ್ರಾಮ ಪಂಚಾಯಿತಿ ಮೊದಲು ಶಿಥಿಲಗೊಂಡ ಕಟ್ಟಡದಲ್ಲಿ ಇದ್ದಿದ್ದ-ರಿಂದ ಅದನ್ನು ಸರ್ಕಾರಿ ಶಾಲೆಗೆ ಸ್ಥಳಾಂತರಿಸಲಾಯಿತು

# ನಮ್ಮ ಸಂಸ್ಕೃತಿ, ಪರಂಪರೆ ಉಳಿಸುವ ಕಾರ್ಯವಾಗಲಿ: ಶಾಸಕ ರಾಜು ಸೇಠ

❑ ನೈಜ್ಯ ದೆಸೆ ನ್ಯೂಸ್



**ಬೆಳಗಾವಿ: ನಮ್ಮ ದೇಶದ ಸಂಸ್ಕೃತಿ, ಪರಂಪರೆಗೆ ಪುರಾತನ ಇತಿಹಾಸ ಇದೆ. ಆಧುನಿಕತೆಯ ಭರಾಟೆಯಲ್ಲಿ ನಮ್ಮ ಪರಂಪರೆಯು ಮರೆಯಾಗುತ್ತಿದೆ. ಹೀಗಾಗಿ ಅದನ್ನು ಉಳಿಸುವ ಬೆಳೆಸುವ ಕಾರ್ಯವಾಗಬೇಕು ಎಂದು ಶಾಸಕ ರಾಜು (ಆಸೀಫ್) ಸೇಠ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.**

ನಗರದ ಮಹಾಂತೇಶ್ ನಗರದಲ್ಲಿರುವ ಮಹಾಂತ್ ಭವನದಲ್ಲಿ ಬೆಳಗಾವಿಯ ಸ್ಪೂರ್ತಿ ಸೋಷಿಯಲ್ ವೆಲ್'ಫೇರ್ ಅಸೋಸಿಯೇಷನ್'ನ ವತಿಯಿಂದ ಆಯೋಜಿಸಲಾದ ಕರ್ನಾಟಕ ರಾಜ್ಯೋತ್ಸವ ಹಾಗೂ ಭಾವಗೀತೆ ಗಾಯನ ಸ್ಪರ್ಧೆ ಮತ್ತು ಕಾರ್ತಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿಶ್ವದ ಅನೇಕ ರಾಷ್ಟ್ರಗಳು ಭಾರತೀಯ ಸಂಸ್ಕೃತಿಗೆ ತಲೆಬಾಗಿವೆ. ಭಾರತೀಯರಾದ ನಾವೇ ನಮ್ಮ ಸಂಸ್ಕೃತಿ- ಸಂಸ್ಕಾರವನ್ನು ಮರೆಯುತ್ತಿದ್ದೇವೆ. ಹಿರಿಯರ ಈ ಪರಂಪರೆ ಬೆಳೆಯಲಿ. ಮುಂದಿನ ಬಾರಿ ಬೃಹತ್ ಸಾಮಾಜಿಕ ಸಾಂಸ್ಕೃತಿಕ ಉಪಕ್ರಮ ಆಯೋಜಿಸುವುದಾದರೇ, ತಮಗೆ ಸಹಾಯ ಸಹಕಾರವಿದೆ ನೀಡಲಾಗುವುದು ಎಂದು ಭರವಸೆ ನೀಡಿದರು. ಅಧ್ಯಕ್ಷೆ ಜ್ಯೋತಿ ಭಾವಿಕಟ್ಟಿ ಅವರು ಮಾತನಾಡಿ,ಕಳೆದ 11 ವರ್ಷದಿಂದ ಸಮಾಜಿಕ, ಸಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ. ಎಲ್ಲ ಮಹಿಳಾ ಮಂಡಳಿಗಳ ಸಹಯೋಗದಿಂದ ಮುಂಬರುವ ದಿನಗಳಲ್ಲಿ ಸಾಮೂಹಿಕ ವಿವಾಹವನ್ನು ಆಯೋಜಿಸುವ ಉದ್ದೇಶವನ್ನು ಹೊಂದಿದ್ದೇವೆ.

ನಮ್ಮ ಮಹಿಳಾ ಮಂಡಳಕ್ಕೆ ಜಾಗೆಯನ್ನು ನೀಡಬೇಕೆಂದು ಶಾಸಕರಲ್ಲಿ ಮನವಿ ಮಾಡಿಕೊಂಡರು. ಈ ಸಂದರ್ಭದಲ್ಲಿ ಸಂಗೀತ ಪ್ರಾಧ್ಯಾಪಕರಾದ ಡಾ. ಸುನೀತಾ ಪಾಟೀಲ್, ರೇಷ್ಮಾ ನೇರ್ಲಿ, ಲತಾ ಕರಡಿಗುದ್ದಿ, ಗೀತಾ ಮಲ್ಲಾಪೂರ, ಪ್ರೇಮಾ ದೇಶನೂರ, ಉಷಾ ಶೆಟ್ಟರ್, ಅಂಜನಾ ಹಿರೇಮಠ, ಸವಿತಾ ಕಳಸಣ್ಣವರ, ಅಶ್ವಿನಿ ಪಾಟೀಲ್, ನಿಶಾ ಝೋಂಡ್, ಶ್ವೇತಾ ಪಾಟೀಲ್, ಅನೀತಾ ಚಟ್ಟೇರ್ ಇತರರು ಇದ್ದರು.

# 4 ರೈಲು ನಿಲ್ದಾಣಗಳಿಗೆ ಸಂತರ ಹೆಸರಿಡಲು ಕೇಂದ್ರಕ್ಕೆ ಶಿಫಾರಸು

❑ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ರಾಜ್ಯದ ವಿಜಯಪುರ, ಬೆಳಗಾವಿ, ಬೀದರ್ ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿರುವ ಸೂರಗೊಂಡನಕೊಪ್ಪ ರೈಲು ನಿಲ್ದಾಣಗಳನ್ನು ಸ್ಥಳೀಯ ಸಾಂಸ್ಕೃತಿಕ ಮಹತ್ತ್ವಕ್ಕೆ ಪೂರಕವಾಗಿ ಬದಲಿಸಿ, ಹೊಸ ನಾಮಕರಣ ಮಾಡಬೇಕೆಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಅವರು ಶಿಫಾರಸು ಮಾಡಿದ್ದು, ಈ ಸಂಬಂಧವಾಗಿ ಕೇಂದ್ರ ಗೃಹ ಸಚಿವಾಲಯಕ್ಕೆ** ಪತ್ರ ಬರೆದಿದ್ದಾರೆ.

ಈ ಪತ್ರದಲ್ಲಿ ವಿಜಯಪುರ ರೈಲು ನಿಲ್ದಾಣಕ್ಕೆ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ರೈಲು ನಿಲ್ದಾಣ, ಬೆಳಗಾವಿ ನಿಲ್ದಾಣ-ಕ್ಕೆ ಶ್ರೀ ಬಸವ ಮಹಾಸ್ವಾಮೀಜಿ, ಬೀದರ್ ನಿಲ್ದಾಣಕ್ಕೆ ಚನ್ನಬಸವ ಪಟ್ಟದ್ದೇವರು ಮತ್ತು ಸೂರಗೊಂಡನಕೊಪ್ಪ ನಿಲ್ದಾಣಕ್ಕೆ ಭಾಯಗಡ ರೈಲು ನಿಲ್ದಾಣ ಎಂದು ಹೊಸ ಹೆಸರುಗಳನ್ನು ನಾಮಕರಣ ಮಾಡಬೇಕೆಂದು ಪ್ರಸ್ತಾಪಿಸಿದ್ದಾರೆ. ಸರ್ಕಾರ ಈ ನಾಲ್ಕು ನಿಲ್ದಾಣಗಳಿಗೆ ಸಂತರ ಹೆಸರು ನಾಮಕರಣ ಮಾಡಲು ಶಿಫಾರಸು ಮಾಡಿದ್ದು, ಅದಕ್ಕೆ ಗೃಹ ಸಚಿವಾಲಯದ ಒಪ್ಪಿಗೆ ಬೇಕಾಗಿದೆ. ಹೀಗಾಗಿ ಮೂಲಸೌಕರ್ಯ ಇಲಾಖೆ ಮೂಲಕ ಪತ್ರ ರವಾನೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ನಾಲ್ಕೂ ರೈಲು ನಿಲ್ದಾಣಗಳು ನೈಋತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗದ ವ್ಯಾಪ್ತಿಯಲ್ಲಿವೆ. ಕರ್ನಾಟಕದ ಈ ಭಾಗಗಳಿಗೆ ತಾವು ಸೂಚಿಸಿರುವ ಸಂತರ ಕೊಡುಗೆ ಮೌಲಿಕವಾಗಿದೆ. ಈ ಶಿಫಾರಸನ್ನು ಅಂಗೀಕರಿಸಿ, ಮರುನಾಮಕರಣದ ಸಂಗತಿಯನ್ನು ಆದಷ್ಟು ಬೇಗ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಸಚಿವರು ಕೋರಿದ್ದಾರೆ.

# ದೇಶದ ಅಭಿವೃದ್ಧಿಗೆ ಹೊಸ ಸಂಶೋಧನೆ ಅತ್ಯಗತ್ಯ: ಡಿಸಿಪಿ ನಾರಾಯಣ ಭರಮಣಿ

❑ ನೈಜ್ಯ ದೆಸೆ ನ್ಯೂಸ್

**ಬೆಳಗಾವಿ: ದೇಶದ ಅಭಿವೃದ್ಧಿಗೆ ಸಂಶೋಧನೆ ಅತ್ಯಗತ್ಯವಾಗಿದೆ. ಹೀಗಾಗಿ ವಿದ್ಯಾರ್ಥಿಗಳು ಹೊಸ-ಹೊಸ ಸಂಶೋಧನೆಗಳ ಕಡೆಗೆ ಸಾಗಿದಾಗ ಮಾತ್ರ ಉದೋಗಗಳನ್ನು ಸೃಷ್ಟಿಯಾಗುತ್ತವೆ. ಜೊತೆಗೆ ನಮ್ಮ ದೇಶವು ಮತ್ತಷ್ಟು ಬಲಿಷ್ಠವಾಗಿ ಬೆಳೆಯಲು ಅನುಕೂಲವಾಗುತ್ತದೆ ಎಂದು ಬೆಳಗಾವಿಯ ಕಾನೂನು ಮತ್ತು ಸುವ್ಯವಸ್ಥೆಯ ಉಪ ಪೊಲೀಸ್ ಆಯುಕ್ತರಾದ ನಾರಾಯಣ. ವಿ. ಭರಮಣಿ ಅವರು ಹೇಳಿದರು.**





ನಗರದ ಜೈನ್ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ರಿಸರ್ಚ್ (ಜೆಸಿಇಆರ್) ಉದ್ಯಮಬಾಗ ಕ್ಯಾಂಪಸ್‌ನ , ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ಎರಡು ದಿನಗಳ ಕಾಲ ಆಯೋಜಿಸಲಾದ "ಸವಿಷ್ಕಾರ್ " ರಾಷ್ಟ್ರೀಯ ಮಟ್ಟದ ತಾಂತ್ರಿಕ-ಸಾಂಸ್ಕೃತಿಕ ಉತ್ಸವವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಶೈಕ್ಷ ಣಿಕ ಸಂಶೋಧನಾ ಕ್ಷೇತ್ರವು ಹಲವು ಸಮಸ್ಯೆಗಳಿಂದ ಹಿಂದೆ ಉಳಿಯುತ್ತಿದೆ. ವಿದ್ಯಾರ್ಥಿಗಳು ಅದಕ್ಕೆ ಚೇತರಿಕೆಯ ನೀಡಬೇಕು. ಅದು ನಿಮ್ಮ ಕೈಯಲ್ಲಿದೆ. ನಿಮ್ಮ ಹೊಸ ಸಂಶೋದನೆ ಆರ್ಥಿಕ ಪ್ರಗತಿ, ಉದ್ಯೋಗ ಸೃಷ್ಟಿ, ಮತ್ತು ಸುಧಾ-ರಿತ ಜೀವನ ಮಟ್ಟವನ್ನು ಸಾಧಿಸಲು ಸಂಶೋಧನೆ ಸಹಾಯ ಮಾಡುತ್ತದೆ. ಕೃತಕ ಬುದ್ಧಿಮತ್ತೆ, ಜೈವಿಕ ತಂತ್ರಜ್ಞಾನ, ಇಂಧನ ಭದ್ರತೆ, ಅಂತರಿಕ್ಷ ತಂತ್ರಜ್ಞಾನ ಮುಂತಾದ ಕ್ಷೇತ್ರಗಳಲ್ಲಿ ಸಂಶೋಧನೆಯು ದೇಶದ ಅಭಿವೃದ್ಧಿಗೆ ಕೊಡುಗೆ ಆಗಬೇಕು ಎಂದು ಹೇಳಿದರು. ನೀವು ಯಶಸ್ವಿನ ಕಡೆಗೆ ಸಾಗಬೇಕಾದರೆ ಇಂಜಿನಿಯ-ರಿಂಗ್ ವಿಷಯದಲ್ಲಿ ನಿಮ್ಮ ಆಯ್ಕೆಯು ನೇರವಾಗಿಬೇಕು.


ಅದೇ ಮುಂದಿನ ದಿನಗಳಲ್ಲಿ ಸಂಶೋಧನೆಗೆ ಬಹಳಷ್ಟು ಸಹಕಾರಿಯಾಗುತ್ತದೆ. ಸಂಶೋಧನಾ ಕ್ಷೇತ್ರದಲ್ಲಿ ಜೈನ್ ಇಂಜಿನಿಯರಿಂಗ್ ಕಾಲೇಜ್ ರಾಷ್ಟ್ರೀಯ- ಅಂತರಾಷ್ಟ್ರೀಯ ಮಟ್ಟದಲ್ಲಿ ಇನ್ನಷ್ಟು ಹೆಸರು ಮಾಡಲಿ ಎಂದು ಹಾರೈಸಿದರು. ಜೆಸಿಇಆರ್‌ನ ಪ್ರಾಚಾರ್ಯ ಮತ್ತು ನಿರ್ದೇಶಕರಾದ ಡಾ. ಎಸ್.ವ್ಹಿ. ಗೋರಬಾಳ ಅವರು ಮಾತನಾಡಿ, ಈಗಿನ ಸ್ಪರ್ಧಾತ್ಮಕ ಹಾಗೂ ವೈಜ್ಞಾನಿಕ ಯುಗದಲ್ಲಿ ಹೊಸ ಸಂಶೋಧನೆಗಳು ನಡೆಯುತ್ತಿವೆ. ಭಾರತವು ಶಕ್ತಿಶಾಲಿಯಾಗಿ ಬೆಳೆಯಬೇಕಾದರೆ ಎಲ್ಲಾ ಕ್ಷೇತ್ರಕ್ಕೂ ಹೊಸ ಸಂಶೋದನೆ ಒಂದೇ ದಾರಿ. ಹೀಗಾಗಿ ವಿದ್ಯಾರ್ಥಿಗಳು ದೇಶದ ಅಭಿವೃದ್ಧಿ ಗುರಿಯಾಗಿಟ್ಟುಕೊಂಡು ಹೊಸ ಹೊಸ ಸಂಶೋಧನೆಗಳು ಇನ್ನೂ ಹೆಚ್ಚಿನ ರೀತಿಯಲ್ಲಿ ನಡೆಸಬೇಕಿದೆ ಎಂದು ತಿಳಿಸಿದರು.

ಭಾರತ ಸಂಪದ್ಭರಿತ ದೇಶ. ನಮ್ಮಲ್ಲಿ ನೈಸರ್ಗಿಕ ಹಾಗೂ ಮಾನವ ಸಂಪನ್ಮೂಲ ನಮ್ಮಲ್ಲಿ ಅಗಾಧವಾಗಿದೆ. ಅದಕ್ಕೆ ಮುಖ್ಯವಾದ ಸಂಶೋಧಗಳನ್ನು ಕಂಡು ಹಿಡಿದಾಗ ದೇಶದ ಪ್ರಗತಿಗೆ ಮತ್ತಷ್ಟು ಸಹಕಾರಿ ಎನ್ನುತ್ತ. ಜೈನ್ ಕಾಲೇಜ್ ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ವಿವಿಧ ಸ್ಪರ್ಧೆಯಲ್ಲಿ ಪಾಲ್ಗೊಂಡು ಹಲವಾರು ಪ್ರಶಸ್ತಿಗೆ ಭಾಗಿಯಾಗಿದ್ದಾರೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಶೋದನಾ ಸ್ಪರ್ಧೆಯಲ್ಲಿ ಬಾಗಿಯಾಗಿ ಕಾಲೇಜ ಕೀರ್ತಿ ಹೆಚ್ಚಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಜೆಸಿಇಆರ್‌ನ ಪ್ರಾಚಾರ್ಯ ಮತ್ತು ನಿರ್ದೇಶಕರಾದ ಡಾ. ಎಸ್.ವ್ಹಿ. ಗೋರಬಾಳ, ಜೈನ್ ಗ್ರುಪ್ ನಿರ್ದೇಶಕರಾದ ಆರ್. ದಾರವಾಡಕರ್ ಅವರು ಅಧ್ಯಕ್ಷತೆ ವಹಿಸಿದರು. ಡಾ. ಪ್ರಕಾಶ ಸೋನವಾಲಕರ, ಕಾರ್ತೀಕ್ ರಾಮದುರ್ಗ, ರಾಘವೇಂದ್ರ ಕಟಗಲ್ಲ, ರಾಹುಲ್ ಬನ್ನೂರ್, ಸಾಕ್ಷಿ ಹತ್ತಿ, ಸಂಭವ ಕೊಚರಿ ಹಾಗೂ ಕಾಲೇಜ್ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

## ಉದ್ಯೋಗ ಪ್ರಕಟಣೆ

ಕೊಪ್ಪಳ ಜಿಲ್ಲೆಯಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕುಷ್ಟಗಿಯಲ್ಲಿ ಖಾಲಿ ಇರುವ 12–ಶುಶೂಷಾಧಿಕಾರಿಗಳ, 01–ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು ಹಾಗೂ 01–ಫಾರ್ಮಸಿಸ್ಟ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ 30/10/2025 ರಿಂದ 15–11–2025 ರವರೆಗೆ ಕೊಪ್ಪಳ ಜಿಲ್ಲಾ ವೆಬ್ ತಾಣ www.koppal.nic.in ನ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿತ್ತು. ಆದರೆ 31–10–2025 ರಿಂದ 04–11–2025 ರವರೆಗೆ ಅರ್ಜಿ ಸಲ್ಲಿಸಲು ತಾಂತ್ರಿಕ ದೋಷ ಕಂಡುಬಂದಿರುವುದರಿಂದ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ: 15–11–2025 ನ್ನು ವಿಸ್ತರಿಸಿ 20–11–2025 ರವರೆಗೆ ಕಾಲಾವಕಾಶ ನೀಡಲಾಗಿದೆ. ಯಾವುದೇ ಕಾರಣಕ್ಕೂ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.


## ಸ್ವತಂತ್ರ್ಯ ಭಾರತದ ಪ್ರಥಮ ಪ್ರಧಾನ ಮಂತ್ರಿ ಜವಹಾರಲಾಲ್ ನೆಹರು ವಿಚಾರಗಳು



ಭಾರತದ ರಾಷ್ಟ್ರ ನಿರ್ಮಾಣ, ಸಮಾಜ ಸುಧಾರಣೆ ಮತ್ತು ಆಧುನಿಕತೆಯ ಮಾರ್ಗದಲ್ಲಿ ಅವರ ಪಾತ್ರ ಅತ್ಯಂತ ಮಹತ್ತರವಾಗಿತ್ತು. ನೆಹರು ಅವರ ಜನನ 1889ರ ನವೆಂಬರ್ 14ರಂದು ಅಲಹಾಬಾದ್‌ನಲ್ಲಿ ನಡೆಯಿತು. ಅವರ ತಂದೆ ಮೊತೀಲಾಲ್ ನೆಹರು ಪ್ರಸಿದ್ಧ ವಕೀಲರಾಗಿದ್ದರಿಂದ, ನೆಹರು ಅವರಿಗೆ ಸಮೃದ್ಧ ಕುಟುಂಬ ಪರಿಸರ ದೊರೆಯಿತು. ಬಾಲ್ಯದಲ್ಲಿ ಮನೆಲ್ಲಿಯೇ ಶಿಕ್ಷಣ ಪಡೆದ ಅವರು ನಂತರ ಇಂಗ್ಲೆಂಡಿಗೆ ತೆರಳಿ ಹ್ಯಾರೋ ಮತ್ತು ಟ್ರಿನಿಟಿ ಕಾಲೇಜ್, ಕ್ಯಾಂಬ್ರಿಡ್ಜ್‌ನಲ್ಲಿ ವಿದ್ಯಾಭ್ಯಾಸ ಮಾಡಿದರು. ಬಳಿಕ ಲಂಡನ್‌ನ ಇನರ್ ಟೆಂಪಲ್‌ನಲ್ಲಿ ಕಾನೂನು ಪದವಿ ಪಡೆದರು.

ಸಂಪನ್ನ ಕುಟುಂಬದಲ್ಲಿ ಬೆಳೆದಿದ್ದರೂ, ಭಾರತಕ್ಕೆ ಮರಳಿದ ನಂತರ ನೆಹರು ಅವರು ತಮ್ಮ ಜೀವನವನ್ನು ರಾಷ್ಟ್ರಸೇವೆಗೆ ಮುಡಿಪಾಗಿಟ್ಟು ರಾಜಕೀಯ ಚಟುವಟಿಕೆಯಲ್ಲಿ ತೊಡಗಿಕೊಂಡರು. 1916ರಲ್ಲಿ ಮಹಾತ್ಮ ಗಾಂಧೀಜಿ ಅವರನ್ನು ಭೇಟಿಯಾಗುವುದು ಅವರ ಜೀವನಕ್ಕೆ ಮಹತ್ವದ ತಿರುವು ತಂದಿತು. ಗಾಂಧೀಜಿಯವರ ಸತ್ಯಾಗ್ರಹ ಹಾಗೂ ಅಹಿಂಸಾ ತತ್ತ್ವಗಳಿಂದ ಪ್ರೇರಿತರಾಗಿ ಅವರು ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತೊಡಗಿಕೊಂಡರು. ಅವರು ಅಸಹಕಾರ ಚಳವಳಿ, ಸಿವಿಲ್ ಅವಿಧೇಯತಾ ಚಳವಳಿ ಮತ್ತು 'ಭಾರತ ಬಿಡಿ' ಚಳವಳಿಗಳಲ್ಲಿ ಸಕ್ರೀಯವಾಗಿ ಪಾಲ್ಗೊಂಡರು. ಬ್ರಿಟಿಷ್ ಸರ್ಕಾರವು ಅವರನ್ನು ಅನೇಕ ಬಾರಿ ಬಂಧಿಸಿತು ಮತ್ತು ಅವರು ಒಟ್ಟು ಸುಮಾರು ಒಂಬತ್ತು ವರ್ಷಗಳಷ್ಟು ಜೈಲಿನಲ್ಲಿ ಕಳೆದರು. ಜೈಲಿನಲ್ಲಿದ್ದಾಗ ಅವರು ಡಿಸ್ಕವರಿ ಆಫ್ ಇಂಡಿಯಾ ಎಂಬ ಪ್ರಸಿದ್ಧ ಕೃತಿಯನ್ನು ರಚಿಸಿದರು, ಇದರಲ್ಲಿ ಭಾರತದ ಸಂಸ್ಕೃತಿ, ಇತಿಹಾಸ ಮತ್ತು ಪರಂಪರೆಯ ವೈವಿಧ್ಯತೆಯನ್ನು ವಿಶ್ಲೇಷಿಸಲಾಗಿದೆ.

ಸ್ವತಂತ್ರ ಭಾರತದ ಪ್ರಧಾನಮಂತ್ರಿಯಾಗಿ ನೆಹರು ಅವರ ದೃಷ್ಟಿ ಆಧುನಿಕ, ವೈಜ್ಞಾನಿಕ, ಪ್ರಗತಿಪರ ಮತ್ತು ಧರ್ಮನಿರಪೇಕ್ಷ ಭಾರತವನ್ನು ನಿರ್ಮಿಸುವುದಾಗಿತ್ತು. ಅವರು ಮಿಶ್ರ ಆರ್ಥಿಕತೆಯ ಮಾದರಿಯನ್ನು ಅಳವಡಿಸಿಕೊಂಡಿದ್ದು, ಸರ್ಕಾರಿ ಮತ್ತು ಖಾಸಗಿ ಕ್ಷೇತ್ರಗಳಿಗೆ ಸಮಾನ ಮಹತ್ವ ನೀಡಿದರು. ಅವರ ನಾಯಕತ್ವದಲ್ಲಿ ದೇಶದಾದ್ಯಂತ ಕೈಗಾರಿಕಾ ಅಭಿವೃದ್ಧಿ, ಅಣೆಕಟ್ಟುಗಳ ನಿರ್ಮಾಣ ಮತ್ತು ವಿಜ್ಞಾನ–ತಂತ್ರಜ್ಞಾನ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಪ್ರಗತಿ ಕಂಡುಬಂದಿತು. ಅವರು ಅಣೆಕಟ್ಟುಗಳು ಮತ್ತು ದೊಡ್ಡ ಯೋಜನೆಗಳನ್ನು "ಆಧುನಿಕ ಭಾರತದ ದೇವಾಲಯಗಳು" ಎಂದು ಕರೆಯುತ್ತಿದ್ದರು.

ನೆಹರು ಅವರು ಅಂತಾರಾಷ್ಟ್ರೀಯ ರಾಜಕೀಯದಲ್ಲಿಯೂ ಮಹತ್ವದ ಸ್ಥಾನವನ್ನು ಪಡೆದಿದ್ದರು. ಶೀತಯುದ್ಧದ ಕಾಲದಲ್ಲಿ ಯಾವುದೇ ಮಹಾಶಕ್ತಿಯ ಗೂಡಿನಲ್ಲಿ ಸೇರುವುದನ್ನು ತಿರಸ್ಕರಿಸಿ ಅವರು *ಅಸಂಲಗ್ನ ಚಳವಳಿ (Non-Aligned Movement) ಗೆ ಪೂರಕವಾದ ನೀತಿಗಳನ್ನು ಅನುಸರಿಸಿದರು. ಯುಗೋಸ್ಲಾವಿಯಾದ ಟಿಟೋ ಮತ್ತು ಈಜಿಪ್ಟ್‌ನ ನಾಸರ್ ಮುಂತಾದ ನಾಯಕರೊಂದಿಗೆ ಸೇರಿ ಅಸಂಲಗ್ನ ಚಳವಳಿಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು.

ಸಂವತ್ಸರ 1962ರಲ್ಲಿ ಚೀನಾದೊಂದಿಗೆ ನಡೆದ ಯುದ್ಧ ನೆಹರು ಅವರ ನೇತೃತ್ವಕ್ಕೆ ದೊಡ್ಡ ಸವಾಲು ಆಗಿದ್ದರೂ, ದೇಶದ ಜನರು ಅವರ ದೃಷ್ಟಿ, ಪ್ರಜಾಸತ್ತಾತ್ಮಕ ನಿಲುವು ಮತ್ತು ಮಾನವೀಯತೆಗಾಗಿ ಅವರನ್ನು ಗೌರವಿಸುತ್ತಲೇ ಇದ್ದರು.

1964ರ ಮೇ 27ರಂದು ನೆಹರು ಅವರು ನಿಧನರಾದರು. ಅವರ ನಿಧನದಿಂದ ಭಾರತವು ತನ್ನ ಅತ್ಯಂತ ದೂರದರ್ಶಿ ನಾಯಕರಲ್ಲಿ ಒಬ್ಬನನ್ನು ಕಳೆದುಕೊಂಡಿತು.

ನೆಹರು ಅವರಿಗೆ ಮಕ್ಕಳು ತುಂಬ ಪ್ರಿಯರಾಗಿದ್ದರು. ಆದ್ದರಿಂದ ಅವರ ಜನ್ಮದಿನವನ್ನು, ನವೆಂಬರ್ 14ವನ್ನು, ಭಾರತದಲ್ಲಿ ಬಾಲ ದಿನವೆಂದು ಆಚರಿಸಲಾಗುತ್ತದೆ. ಅವರು ಮಕ್ಕಳಲ್ಲಿ ಭಾರತದ ಭವಿಷ್ಯವಿದೆ ಎಂದು ನಂಬುತ್ತಿದ್ದರು.

ನಜೀರ ಅಹಮದ ಕಾಜಿ ನಿ
ಉಪನ್ಯಾಸಕರು ವಿಜಯಪುರ

## ಬಲ್ಡೋಟ ಕಾರ್ಖಾನೆ ಕಾರ್ಮಿಕ ಸಾವಿಗೆ SUCI (C) ಪಕ್ಷದ ತೀವ್ರ ಖೇದ: ತಕ್ಷಣವೇ 25 ಲಕ್ಷ ಪರಿಹಾರ ಮುಖಂಡ ಶರಣು ಗಡ್ಡಿ ಆಗ್ರಹ"

❏ ನೈಜ್ಯ ದೆಸೆ ನ್ಯೂಸ್

ಕೊಪ್ಪಳ: ಕೊಪ್ಪಳದ ಹತ್ತಿರ ಬಲ್ಡೋಟ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಕಿನ್ನಾಳ ಗ್ರಾಮದ ವೀರಭದ್ರಪ್ಪ ಕುಂಬಾರ್ (40) ಅವರು ಕೆಲಸದ ವೇಳೆ ಸಂಭವಿಸಿದ ದುರ್ಘಟನೆಯಲ್ಲಿ ಸಾವನ್ನಪ್ಪಿದ ಘಟನೆಗೆ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷ ತೀವ್ರ ಖೇದ ವ್ಯಕ್ತಪಡಿಸಿದೆ.




ಈ ಕುರಿತು ಬುಧುವಾರ ಪಕ್ಷದ ಸದಸ್ಯ ಶರಣು ಗಡ್ಡಿ ಅವರು ನೀಡಿದ ಪ್ರಕಟಣೆಯಲ್ಲಿ, "ಮೃತ ಕಾರ್ಮಿಕನ ಕುಟುಂಬಕ್ಕೆ ತಕ್ಷಣ 25 ಲಕ್ಷ ಪರಿಹಾರ ನೀಡಬೇಕು ಹಾಗೂ ಕುಟುಂಬದ ಸದಸ್ಯರಿಗೆ ಶಾಶ್ವತ ಉದ್ಯೋಗದ ಭರವಸೆ ಕೊಡಬೇಕು," ಎಂದು ಒತ್ತಾಯಿಸಿದ್ದಾರೆ. ಕಾರ್ಖಾನೆಗಳಲ್ಲಿ ಕಾರ್ಮಿಕರ ಜೀವಭದ್ರತೆ ಕಡೆಗಣನೆಗೆ ಒಳಗಾಗಿದ್ದು, ಸುರಕ್ಷತಾ ಕ್ರಮಗಳ ಅಭಾವದಿಂದಲೇ ವೀರಭದ್ರಪ್ಪ ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ ಬೇಸರ ವ್ಯಕ್ತಪಡಿಸಿದರು.

## ತಂಬಾಕು ಮುಕ್ತ ಯುವ ಅಭಿಯಾನ

❏ ನೈಜ್ಯ ದೆಸೆ ನ್ಯೂಸ್

ಕಲಬುರಗಿ: ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಮತ್ತು ತಾಲೂಕ ತನಿಕಾ ದಳದ ತಂಡವು ತಂಬಾಕು ಮುಕ್ತ ಯುವ ಅಭಿಯಾನ 3.0 ಅಂಗವಾಗಿ COTPA 2003 ಕಾಯ್ದೆ ಅಡಿಯಲ್ಲಿ ಜಿಲ್ಲಾ ಸಮೀಕ್ಷಣಾಧಿಕಾರಿಗಳವರ ಮಾರ್ಗದರ್ಶನದಲ್ಲಿ ಕಲಬುರಗಿ ನಗರದ ಪ್ರಮುಖ ಪಾನ್ ಶಾಪ್, ಹೋಟೆಲ್, ಕಿರಾಣಿ ಅಂಗಡಿಗಳು,




ಸಾರ್ವಜನಿಕ ಸ್ಥಳಗಳಲ್ಲಿ ಭೇಟಿ ಮಾಡಿ ಉಲ್ಲಂಘನೆ ಕಂಡು ಬಂದಲ್ಲಿ ದಂಡ ವಿಧಿಸಿ ಮತ್ತು ಆರೋಗ್ಯ ಜಾಗೃತಿಯನ್ನು ನೀಡಲಾಯಿತು. ಇಲ್ಲಿವರೆಗೆ 68 ಪ್ರಕರಣಗಳು ದಾಖಲಾಗಿದ್ದು, ಈ ತನಿಕಾ ತಂಡದಲ್ಲಿ ಮಹಾನಗರ ಪಾಲಿಕೆ ಅಧಿಕಾರಿಗಳು ಪೋಲಿಸ್ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ತಂಡ ಭಾಗವಹಿಸಿದ್ದರು.

ನೈಜ್ಯೆ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಬೆಳಗಾವಿಯಲ್ಲಿ ನಕಲಿ ಕಾಲ್ ಸೆಂಟರ್ ಪತ್ತೆ; ಅಮೆರಿಕ ಪ್ರಜೆಗಳಿಗೆ ವಂಚಿಸಿದ 33 ಜನರ ಬಂಧನ

❏ ನೈಜ್ಯ ದೆಸೆ ನ್ಯೂಸ್



ಬೆಳಗಾವಿ: ಅಂತರರಾಷ್ಟ್ರೀಯ ಪ್ರಜೆಗಳಿಗೆ ವಂಚಿಸುತ್ತಿದ್ದ ಬೆಳಗಾವಿ ಮೂಲದ ನಕಲಿ ಕಾಲ್ ಸೆಂಟರ್ ಅನ್ನು ಪತ್ತೆಹಚ್ಚಿದ್ದು, 33 ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ. ಬೆಂಗಳೂರಿನ ಆಂತರಿಕ ಭದ್ರತಾ ವಿಭಾಗ(ಐ–ಎಸ್‌ಡಿ) ಮೂರು ದಿನಗಳ ಹಿಂದೆ ನೀಡಿದ ಸುಳಿವು ಮತ್ತು ಬುಧವಾರ ಅನುಮಾನಾಸ್ಪದ ಕೇಂದ್ರದ ಬಗ್ಗೆ ಹೆಚ್ಚುವರಿ ಅನಾಮಧೇಯ ದೂರಿನ ಮೇರೆಗೆ ಈ ಕಾರ್ಯಾಚರಣೆ ನಡೆಸಲಾಯಿತು.

ಈ ಮಾಹಿತಿಯ ಆಧಾರದ ಮೇಲೆ, ಎಫ್‌ಐಆರ್ ದಾಖಲಿಸಿಕೊಂಡ ಪೊಲೀಸರು, ಕಾಲ್ ಸೆಂಟರ್ ಕಾರ್ಯನಿರ್ವಹಿಸುತ್ತಿದ್ದ ಬಾಕ್ಸೈಟ್ ರಸ್ತೆಯಲ್ಲಿರುವ ಕುಮಾರ್ ಹಾಲ್ ಮೇಲೆ ದಾಳಿ ನಡೆಸಿದ್ದಾರೆ. ಈ ಕಾಲ್ ಸೆಂಟರ್ ಅಮೆರಿಕನ್ ನಾಗರಿಕರನ್ನು ಗುರಿಯಾಗಿಸಿಕೊಂಡು, ಆನ್‌ಲೈನ್ ಟ್ರೇಡಿಂಗ್ ಹೆಸರಿನಲ್ಲಿ ಜನರಿಗೆ ವಂಚಿಸಿ ಹಣ ವರ್ಗಾಯಿಸಿಕೊಳ್ಳುತ್ತಿತ್ತು ಎಂದು ಬೆಳಗಾವಿ ನಗರ ಪೊಲೀಸ್ ಆಯುಕ್ತ ಬೋರ್ಸೆ ಭೂಷಣ್ ಗುಲಾಬ್ರಾವ್ ಅವರು ತಿಳಿಸಿದ್ದಾರೆ. 28 ಪುರುಷರು ಮತ್ತು ಐದು ಮಹಿಳೆಯರು ಸೇರಿದಂತೆ ಒಟ್ಟು 33 ಜನರನ್ನು ಬಂಧಿಸಲಾಗಿದ್ದು, ಅವರಿಂದ 37 ಲ್ಯಾಪ್‌ಟಾಪ್‌ಗಳು ಮತ್ತು 37 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿಗಳು ಅಮೆರಿಕಾದ ಪ್ರಜೆಗಳಿಗೆ ಕರೆ ಮಾಡಿ, ಶೇರ್ ಟ್ರೇಡಿಂಗ್, ಹೊಸ ಮೊಬೈಲ್ ಆಫರ್ ಸೇರಿದಂತೆ ನಾನಾ ಆಮಿಷ ಒಡ್ಡಿ ಹಣ ದೋಚುತ್ತಿದ್ದರು. ದಾಳಿ ವೇಳೆ ಪತ್ತೆಯಾದ ಮೊಬೈಲ್ ಹಾಗೂ ಲ್ಯಾಪ್‌ಟಾಪ್ ಪರಿಶೀಲಿಸಿದಾಗ ವಿಶೇಷ ಸಾಫ್ಟ್‌ವೇರ್ ಬಳಸಿ ಅಮೆರಿಕಾದ ಅಸಂಖ್ಯಾತ ಮೊಬೈಲ್‌ಗಳಿಗೆ ಕರೆ ಮಾಡಿರುವುದು ಗೊತ್ತಾಗಿದೆ. ನೈಜ ಲೊಕೇಷನ್ ಮಾಹಿತಿ ಮರೆಮಾಚಿ ನಕಲಿ ಲೊಕೇಷನ್ ತೋರಿಸುವ ಸಾಫ್ಟ್‌ವೇರ್ ಬಳಕೆ ಮಾಡುತ್ತಿದ್ದರು" ಎಂದು ಅವರು ತಿಳಿಸಿದ್ದಾರೆ. ಡಾ. ರೆಡ್ಡಿಸ್ ಲ್ಯಾಬೊರೇಟರೀಸ್ ಗೆ 2.16 ಕೋಟಿ ರೂ ವಂಚನೆ! ತನಿಖೆ ಆರಂಭ ಆರೋಪಿಗಳು ಅಸ್ಸಾಂ, ಗುಜರಾತ್, ಹಿಮಾಚಲ ಪ್ರದೇಶ, ಜಾರ್ಖಂಡ್, ಮಹಾರಾಷ್ಟ್ರ, ಮೇಘಾಲಯ, ನಾಗಾಲ್ಯಾಂಡ್, ರಾಜಸ್ಥಾನ, ಉತ್ತರ ಪ್ರದೇಶ, ಉತ್ತರಾಖಂಡ ಮತ್ತು ಪಶ್ಚಿಮ ಬಂಗಾಳದವರಾಗಿದ್ದು, ನೇಪಾಳದ ಒಬ್ಬ ವ್ಯಕ್ತಿ ಸಹ ಸೇರಿದ್ದಾರೆ.

ಈ ಜಾಲದ ಮುಖ್ಯ ಸಂಚುಕೋರ ಗುಜರಾತ್‌ನಲ್ಲಿ ನೆಲೆಸಿದ್ದು, ಇನ್ನಿಬ್ಬರು ಪಶ್ಚಿಮ ಬಂಗಾಳದಲ್ಲಿದ್ದು, ಪೊಲೀಸರು ಅವರನ್ನು ಪತ್ತೆಹಚ್ಚುತ್ತಿದ್ದಾರೆ. ಈ ಕಾಲ್ ಸೆಂಟರ್ ಕಳೆದ ಮಾರ್ಚ್‌ನಿಂದ ಸಕ್ರಿಯವಾಗಿದ್ದು, ಕಾರ್ಯಾಚರಣೆಯನ್ನು ವಿಸ್ತರಿಸಲು ಯೋಜಿಸುತ್ತಿತ್ತು. ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 66ಅ ಮತ್ತು 66ಆ ಅಡಿಯಲ್ಲಿ ಭಾರತೀಯ ನ್ಯಾಯ ಸಂಹಿತಾ(BNS)ನ ಸೆಕ್ಷನ್ 319 ರ ಅಡಿಯಲ್ಲಿ ಕೇಸ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಂಚನೆಯು ಅಮೆರಿಕನ್ ನಾಗರಿಕರನ್ನು ಗುರಿಯಾಗಿಸಿಕೊಂಡಿರುವುದರಿಂದ, ಐಟಿ ಕಾಯ್ದೆಯ ಸೆಕ್ಷನ್ 75 ಮತ್ತು ಭಾರತದ ಹೊರಗಿನ ಅಪರಾಧಗಳಿಗೆ ನ್ಯಾಯವ್ಯಾಪ್ತಿಯನ್ನು ವಿಸ್ತರಿಸುವ

# ರಾಜ್ಯದ ಶೇ. 40 ರಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ರಕ್ಷಣೆ, ಶಿಕ್ಷಣ ಸಮಿತಿಗಳೇ ಇಲ್ಲ!



❏ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ರಾಜ್ಯದ ಕನಿಷ್ಠ ಶೇಕಡ 40 ರಷ್ಟು ಗ್ರಾಮ ಪಂಚಾಯಿತಿಗಳು ಪೂರ್ಣ ಪ್ರಮಾಣದ ಮಹಿಳಾ ಮತ್ತು ಮಕ್ಕಳ ರಕ್ಷಣಾ ಸಮಿತಿಗಳು(ಘ–ಅಅ) ಹಾಗೂ ಶಿಕ್ಷಣ ಕಾರ್ಯಪಡೆಗಳನ್ನು ಹೊಂದಿಲ್ಲ ಎಂಬ ಆಘಾತಕಾರಿ ಮಾಹಿತಿ ಹೊರ ಬಿದ್ದಿದೆ.

ಈ ಸಮಿತಿಗಳು ಬಾಲ್ಯ ವಿವಾಹಗಳು, ಹದಿಹರೆಯದವರ ಗರ್ಭಧಾರಣೆ, ಶಾಲೆ ಬಿಡುವವರು, ಬಾಲ ಕಾರ್ಮಿಕ ಪದ್ಧತಿ ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳನ್ನು ಪತ್ತೆಹಚ್ಚುವ ಕೆಲಸ ಮಾಡುತ್ತವೆ. ಈ ಸಮಿತಿಗಳಲ್ಲಿ ಹಲವು ಕಾರ್ಯನಿರ್ವಹಿಸದ ಕಾರಣ, ಅಂತಹ ಪ್ರಕರಣಗಳು ಗಮನಕ್ಕೆ ಬರುತ್ತಿಲ್ಲ. ಕರ್ನಾಟಕದಲ್ಲಿ ಸುಮಾರು 6,000 ಗ್ರಾಮ ಪಂಚಾಯಿತಿಗಳಿವೆ. ಪ್ರತಿ ಪಂಚಾಯಿತಿ ಮೂರು ಅಥವಾ ನಾಲ್ಕು ಗ್ರಾಮಗಳನ್ನು ಒಳಗೊಂಡಿರುತ್ತವೆ. ಹೆಚ್ಚುತ್ತಿರುವ ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ಮತ್ತು ಶಾಲೆ ಬಿಡುವ ಪ್ರಕರಣಗಳನ್ನು ಪರಿಹರಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು 2019 ರಲ್ಲಿ ಈ ಸಮಿತಿಗಳನ್ನು ಸ್ಥಾಪಿಸಿತು.

ಮಹಿಳಾ ಮತ್ತು ಮಕ್ಕಳ ರಕ್ಷಣಾ ಸಮಿತಿಯು ಸಾಮಾನ್ಯವಾಗಿ ಪಂಚಾಯತ್ ಅಧ್ಯಕ್ಷರ ನೇತೃತ್ವದಲ್ಲಿ 13 ಸದಸ್ಯರನ್ನು ಹೊಂದಿರುತ್ತದೆ. ಸಮಿತಿಯು ಪಂಚಾಯತ್‌ನ ಇಬ್ಬರು ಮಹಿಳಾ ಸದಸ್ಯರು, ಒಬ್ಬ ಮಹಿಳಾ ಶಾಲಾ ಶಿಕ್ಷಕಿ, ಬೀಟ್ ಪೊಲೀಸ್ ಅಧಿಕಾರಿ, ಗ್ರಾಮ ಲೆಕ್ಕಾಧಿಕಾರಿ, ಓಉಜಿ ಸದಸ್ಯೆ, ಅಂಗನವಾಡಿ ಕಾರ್ಯಕರ್ತೆ, ಸ್ವಸಹಾಯ ಗುಂಪಿನ ಸದಸ್ಯೆ, ಇಬ್ಬರು ವಿದ್ಯಾರ್ಥಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಸದಸ್ಯರನ್ನು ಸಹ ಹೊಂದಿರುತ್ತದೆ. ಗ್ರಾಮ ಪಂಚಾಯಿತಿ ಆದಾಯದಲ್ಲಿ ದಕ್ಷಿಣ ರಾಜ್ಯಗಳ ಪ್ರಾಬಲ್ಯ; ತಲಾದಾಯ ಸಂಗ್ರಹದಲ್ಲಿ ಗೋವಾ, ಕೇರಳ ಮುಂದು! ಗ್ರಾಮ ಪಂಚಾಯತ್ ಆಡಳಿತಾಧಿಕಾರಿಗಳು, ಪಂಚಾಯತ್ ಮಿತಿಯೊಳಗೆ ಬರುವ ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ಸೇರಿದಂತೆ 12 ಸದಸ್ಯರನ್ನು ಒಳಗೊಂಡ ಶಿಕ್ಷಣ ಕಾರ್ಯಪಡೆಯನ್ನು 2020 ರಲ್ಲಿ ಸ್ಥಾಪಿಸಲಾಯಿತು.

ಶಾಲೆಗಳಲ್ಲಿ ಮಕ್ಕಳನ್ನು ದಾಖಲಿಸುವ ಕಾರ್ಯವನ್ನು ಈ ಶಿಕ್ಷಣ ಕಾರ್ಯಪಡೆ ಮಾಡುತ್ತದೆ. ಶೇ. 40 ರಷ್ಟು ಪಂಚಾಯತ್‌ಗಳಲ್ಲಿ ಯಾವುದೇ ಸಮಿತಿ ರಚನೆಯಾಗಿಲ್ಲ ಅಥವಾ ಸಮಿತಿಗಳನ್ನು ರಚಿಸಲಾದ ಸ್ಥಳಗಳಲ್ಲಿ ಅವು ಕಾರ್ಯನಿರ್ವಹಿಸುತ್ತಿಲ್ಲ ಮತ್ತು ಸದಸ್ಯರಿಗೆ ತಮ್ಮ ಜವಾಬ್ದಾರಿಗಳ ಬಗ್ಗೆ ತಿಳಿದಿಲ್ಲ ಎಂದು ಟಿಎನ್‌ಐಇಗೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಕೆ.ಟಿ. ತಿಪ್ಪೇಸ್ವಾಮಿ ಅವರು ತಿಳಿಸಿದ್ದಾರೆ. ತಿಪ್ಪೇಸ್ವಾಮಿ ಅವರು ಈ ಸಂಬಂಧ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತರಿಗೆ ಪತ್ರ ಬರೆದು ಪರಿಸ್ಥಿತಿಯನ್ನು ಎತ್ತಿ ತೋರಿಸಿದ್ದಾರೆ. ಆಯುಕ್ತರು ವಿವಿಧ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಈ ಸಮಿತಿಗಳ ಕಾರ್ಯಾಚರಣೆಯನ್ನು ಸುಗಮಗೊಳಿಸುವಂತೆ ಕೇಳಿಕೊಂಡಿದ್ದಾರೆ.

## ಬಾಗಲಕೋಟೆ: ಕಟ್ಟೆ ಹೊಡೆದ ಕಬ್ಬು ಬೆಳೆಗಾರರ ಆಕ್ರೋಶದ ಕಿಚ್ಚು; 100ಕ್ಕೂ ಹೆಚ್ಚು ಟ್ರಾಲಿಗಳಿಗೆ ಬೆಂಕಿ

❏ ನೈಜ್ಯ ದೆಸೆ ನ್ಯೂಸ್



ಬಾಗಲಕೋಟೆ: ಪ್ರತಿ ಟನ್ ಕಬ್ಬಿಗೆ 3,500 ರೂಪಾಯಿ ಘೋಷಿಸುವಂತೆ ಆಗ್ರಹಿಸಿ ಕಬ್ಬು ಬೆಳೆಗಾರರು ನಡೆಸಿರುವ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದೆ. ಮುಧೋಳ ತಾಲೂಕಿನ ಸೈದಾಪುರ ಗ್ರಾಮದ ಸಮೀರವಾಡಿಯ ಗೋದಾವರಿ ಕಾರ್ಖಾನೆ ಬಳಿ ಸಾಲಾಗಿ ನಿಲ್ಲಿಸಿದ್ದ 100ಕ್ಕೂ ಹೆಚ್ಚು ಟ್ರ್ಯಾಕ್ಟರ್ ಟ್ರಾಲಿಗಳಿಗೆ ರೈತರು ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುತ್ತಿದ್ದರು ಕಾರ್ಖಾನೆ ಮಾಲೀಕರು ಮಾತುಕತೆಗೆ ಬಾರದ ಕಾರಣ ಹಾಗೂ ತಮ್ಮ ಬೆಳೆಯನ್ನು ಗೋದಾಮಿಗೆ ಕೊಂಡೊಯ್ಯುತ್ತಿದ್ದ ರೈತರ ಟ್ರ್ಯಾಕ್ಟರ್ ಗಳಿಗೆ ಪ್ರತಿಭಟನಾಕಾರರು ಬೆಂಕಿ ಹಚ್ಚಿದ್ದಾರೆ.

ಕಾರ್ಖಾನೆಗೆ ಕಬ್ಬು ತುಂಬಿಕೊಂಡು ಹೋಗುತ್ತಿದ್ದ ಟ್ರ್ಯಾಕ್ಟರ್ ನನ್ನು ರಸ್ತೆ ಮಧ್ಯೆಯೇ ತಡೆದ ಕಬ್ಬು ಬೆಳೆಗಾರರು, ಟ್ರ್ಯಾಕ್ಟರ್ ಗೆ ಬೆಂಕಿ ಹಚ್ಚಿ ಟ್ರ್ಯಾಕ್ಟರ್ ನ್ನು ಉರುಳಿಸಿದ್ದರು. ಬಳಿಕ ಸಮೀರವಾಡೆ ಗೋದಾವರಿ ಕಾರ್ಖಾನೆಗೆ ಮುತ್ತಿಗೆ ಹಾಕಲು ಬೈಕ್, ವಾಹನಗಳಲ್ಲಿ ತೆರಳಿದ ರೈತರು ಅಲ್ಲಿದ್ದ ಕಬ್ಬಿನ ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ಕಾರ್ಖಾನೆಯ ಆವರಣದಲ್ಲಿ ನಿಲ್ಲಿಸಿದ್ದ ಕಬ್ಬು ತುಂಬಿದ್ದ 20ಕ್ಕೂ ಹೆಚ್ಚು ಟ್ರ್ಯಾಕ್ಟರ್ ಗಳಿಗೆ ರೈತರು ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಬ್ಬಿನ ಲೋಡ್ ಗಳು ರೈತರ ಆಕ್ರೋಶದ ಬೆಂಕಿಗೆ ಧಗ ಧಗನೆ ಹೊತ್ತಿ ಉರಿದಿದೆ. ಘಟನಾ ಸ್ಥಳಕ್ಕೆ ಧಾವಿಸಿರುವ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಲು ಹರಸಾಹಸ ಪಡುತ್ತಿದ್ದಾರೆ. ರೈತರು ಶಾಂತಿ ಕಾಪಾಡಬೇಕು. ಮಾತುಕತೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಕಾನೂನು ಕೈಗೆತ್ತಿಕೊಳ್ಳದಂತೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಮನವಿ ಮಾಡಿದ್ದಾರೆ.

ಸರ್ಕಾರವು ತಮ್ಮ ಬೇಡಿಕೆಯನ್ನು ಈಡೇರಿಸಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದ ರೈತರು, ಕಾರ್ಖಾನೆಗಳಿಗೆ ಕಬ್ಬು ಪೂರೈಸಲು ಸಿದ್ಧರಿದ್ದ ಇತರ ರೈತರ ನಿರ್ಧಾರದಿಂದ ಅಸಮಾಧಾನಗೊಂಡಿದ್ದಾರೆ. ಗುರುವಾರ ಮುಧೋಳ ತಾಲೂಕಿನಲ್ಲಿ ಬಂದ್‌ಗೆ ಕರೆ ನೀಡಿ ಪ್ರತಿಭಟನೆ ನಡೆಸುತ್ತಿದ್ದ ರೈತರು ಸಮೀರವಾಡಿಯ ಕಡೆಗೆ ಮೆರವಣಿಗೆ ಆರಂಭಿಸಿದರು. ಎರಡೂ ಕಡೆಯ ರೈತರ ನಡುವೆ ವಾಗ್ವಾದ ನಡೆದ ನಂತರ ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿದ ಘಟನೆ ನಡೆದಿದೆ. ಒಂದು ವರ್ಗದ ರೈತರು ಕಬ್ಬು ಪೂರೈಸಲು ಸಿದ್ಧರಿದ್ದರೆ ಇತರರು ಅದನ್ನು ವಿರೋಧಿಸುತ್ತಿದ್ದಾರೆ. ವಾಗ್ವಾದದ ನಂತರ ಕೆಲವು ರೈತರು ಮೊದಲು ಪರಸ್ಪರ ಕಲ್ಲು ತೂರಾಟ ನಡೆಸಿದರು.

ನಂತರ ನಿಲ್ಲಿಸಿದ್ದ ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿದ್ದಾರೆ. ಟ್ರ್ಯಾಕ್ಟರ್ ಸುಟ್ಟುಹೋಗುತ್ತಿರುವ ವಿಡಿಯೋ ವೈರಲ್ ಆಗುತ್ತಿದೆ. ನಿಖರವಾದ ಸಂಖ್ಯೆಯ ಟ್ರ್ಯಾಕ್ಟರ್‌ಗಳು ಸುಟ್ಟುಹೋಗಿವೆ ಎಂಬ ದೃಢೀಕೃತ ವರದಿಗಳಿಲ್ಲದ ಕಾರಣ, ಕನಿಷ್ಠ ನೂರು ಟ್ರ್ಯಾಕ್ಟರ್‌ಗಳು ಬೆಂಕಿಗೆ ಆಹುತಿಯಾಗಿವೆ ಎಂದು ಹೇಳಲಾಗುತ್ತಿದೆ. ಅವುಗಳ ಬಳಿ ನಿಲ್ಲಿಸಿದ್ದ ಹಲವಾರು ಬೈಕ್ ಗಳು ಸಹ ಸುಟ್ಟುಹೋಗಿವೆ. ಬೆಂಕಿಯನ್ನು ನಂದಿಸಲು ಅಗ್ನಿಶಾಮಕ ಮತ್ತು

## ಶಿಕ್ಷಣ ಮಾರ್ಗದರ್ಶಿ ವಿಶೇಷ

### MBBS ಕೋರ್ಸ್

MBBS ಒಂದು ಅತ್ಯಂತ ಗೌರವಾನ್ವಿತ ಕೋರ್ಸ್ ಆಗಿದ್ದು, ಮಾನವ ಆರೋಗ್ಯ ಸೇವೆಗೆ ಅತ್ಯುತ್ತಮ ಅವಕಾಶ ನೀಡುತ್ತದೆ. ಪರಿಶ್ರಮ, ಧೈರ್ಯ ಮತ್ತು ಸೇವಾ ಮನೋಭಾವ ಇದ್ದರೆ ಈ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಬಹುದು. ಭಾರತದ ಒಟ್ಟು 708 MBBS ಕಾಲೇಜಗಳು ಕರ್ನಾಟಕದಲ್ಲಿ 71 MBBS ಮೆಡಿಕಲ್ ಕಾಲೇಜುಗಳಿವೆ. ರಾಯಚೂರ ಜಿಲ್ಲೆಯಲ್ಲಿ 2 MBBS ಕಾಲೇಜುಗಳಿವೆ.

MBBS Bachelor of Medicine and Bachelor of Surgery (ವೈದ್ಯಕೀಯ ಮತ್ತು ಶಸ್ತ್ರಚಿಕಿತ್ಸೆಯ ಪದವಿ)

**ಕೋರ್ಸ್ ಅವಧಿ:** ಒಟ್ಟು 5 ವರ್ಷ 6 ತಿಂಗಳು (5.5 years) 4.5 ವರ್ಷಗಳು ತರಗತಿ ಅಧ್ಯಯನ (theoretical&practical) 1ವರ್ಷ ಇಂಟರ್ನ್ಶಿಪ್ (Internship) ಆಸ್ಪತ್ರೆಯಲ್ಲಿ ಕಡ್ಡಾಯ ಪ್ರಾಯೋಗಿಕ

**ತರಬೇತಿ ಅರ್ಹತೆ** (Eligibility Criteria): ಶೈಕ್ಷಣಿಕ ಅರ್ಹತೆ: 12ನೇ ತರಗತಿ (PUC/10+2) ನಲ್ಲಿ Physics, Chemistry, Biology (PCB) ಮತ್ತು English ವಿಷಯಗಳು ಕಡ್ಡಾಯ, ಕನಿಷ್ಠ 50% ಅಂಕಗಳು (SC/ST/OBC ಅಭ್ಯರ್ಥಿಗಳಿಗೆ 40% ಅಂಕಗಳು). ಪ್ರವೇಶ ಪರೀಕ್ಷೆ (Entrance Exam) NEET-UG (National Eligibility cum Entrance Test) ಪರೀಕ್ಷೆಯ ತೇರ್ಗಡೆಯಾಗಬೇಕು, ಈ ಪರೀಕ್ಷೆಯ ಮೂಲಕ ಭಾರತದಲ್ಲಿ ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳಿಗೆ ಪ್ರವೇಶ ದೊರೆಯುತ್ತದೆ.

**ವಯೋಮಿತಿ** (Age Limit): ಕನಿಷ್ಠ ವಯಸ್ಸು: 17 ವರ್ಷ (ಪ್ರವೇಶ ಸಮಯದಲ್ಲಿ) ಗರಿಷ್ಠ ವಯಸ್ಸು: 25 ವರ್ಷ (ಸಾಮಾನ್ಯ) / 30 ವರ್ಷ (SC/ST/OBC) ಇಂಟರ್ನ್ಶಿಪ್ ಅವಧಿ (Internship): ಅಂತಿಮ ವರ್ಷದ ನಂತರ 1 ವರ್ಷ ಕಡ್ಡಾಯ ಇಂಟರ್ನ್ಶಿಪ್ ಆಸ್ಪತ್ರೆಯಲ್ಲಿ ಮಾಡಬೇಕು.,

**MBBS ನಂತರ ಅವಕಾಶಗಳು** (Career Opportunities) : Postgraduate Studies (MD/MS) ವೈದ್ಯಕೀಯ ವಿಭಾಗಗಳಲ್ಲಿ MD/MS ಉನ್ನತ ಶಿಕ್ಷಣ ಮಾಡಬಹುದು., IAS , KAS ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಅವಕಾಶ. Government / Private Hospitals: ಸರಕಾರಿ ಹಾಗೂ ಖಾಸಗಿ ವೈದ್ಯರಾಗಿ ಕೆಲಸ ಮಾಡಲು ಅವಕಾಶ. Research / Teaching: ವೈದ್ಯಕೀಯ ಸಂಶೋಧನೆ ಅಥವಾ ಕಾಲೇಜುಗಳಲ್ಲಿ ಅಧ್ಯಾಪಕರಾಗಿ ಕಾರ್ಯನಿರ್ವಹಿಸುವುದು. Army Medical Services / Civil Services: ರಕ್ಷಣಾ ವಿಭಾಗ ಅಥವಾ ಆಡಳಿತಾತ್ಮಕ ಹುದ್ದೆಗಳು. Private Practice: ಸ್ವಂತ ಕ್ಲಿನಿಕ್ ಅಥವಾ ಆಸ್ಪತ್ರೆ ಆರಂಭಿಸಬಹುದು.

## ಭಕ್ತರಹಳ್ಳಿ ಹಾಲು ಉತ್ಪಾಧಕರ ಸಹಕಾರ ಸಂಘದ ಅಧಿಕಾರ ಕಾಂಗ್ರೇಸ್ ತೆಕ್ಕೆಗೆ

❑ ನೈಜ್ಯ ದೆಸೆ ನ್ಯೂಸ್



**ಶಿಡ್ಲಘಟ್ಟ: ತಾಲೂಕಿನ ಭಕ್ತರಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆಯೂ ಕುತೂಹಲ ಕೆರಳಿಸಿತ್ತು. ಹಾಗೆಯೇ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯು ತೀವ್ರ ಕುತೂಹಲ ಕೆರಳಿಸಿದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಜಯಗಳಿಸುವ ಮೂಲಕ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.**

ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಅನಿತಾ ಸುಬ್ಬಣ್ಣ, ಜೆಡಿ–ಎಸ್ ಬೆಂಬಲಿತ ಚಂದ್ರಶೇಖರ್ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಎ.ಎನ್.ದೇವರಾಜ್ ಹಾಗೂ ಜೆಡಿಎಸ್ ಬೆಂಬಲಿತ ವೆಂಕಟೇಶ್ ನಾಮಪತ್ರ ಸಲ್ಲಿಸಿದ್ದರು. ಚುನಾವಣಾ ಅಧಿಕಾರಿ ಮಂಜುನಾಥ್ ಚುನಾವಣಾ ಪ್ರಕ್ರಿಯೆ ನಡೆಸಿ, ಚುನಾವಣೆಯ ನಡೆಸಿದರು. ಅಧ್ಯಕ್ಷರ ಸ್ಥಾನಕ್ಕೆ ಅನಿತಾ ಸುಬ್ಬಣ್ಣ ಅವರಿಗೆ 8 ಮತಗಳು ಚಲಾವಣೆಗೊಂಡಿದ್ದರೆ, ಅವರ ಪ್ರತಿಸ್ಪರ್ಧಿ ಚಂದ್ರಶೇಖರ್ ಅವರಿಗೆ 5 ಮತಗಳು ಲಭಿಸಿದವು ಹೀಗಾಗಿ ಚುನಾವಣೆ ಅಧಿಕಾರಿಗಳು ಅನಿತಾ ಸುಬ್ಬಣ್ಣ ಅವರು ಅಧ್ಯಕ್ಷರಾಗಿ ಆಯ್ಕೆ ಮಾಡಿದರೆ, ಅದೇ ರೀತಿ ಉಪಾಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಎ.ಎನ್.ದೇವರಾಜ್ ಅವರಿಗೆ ಎಂಟು ಮತಗಳು ಹಾಗೂ ಅವರ ಪ್ರತಿಸ್ಪರ್ಧಿ ಜೆಡಿ–ಎಸ್ ಬೆಂಬಲಿತ ವೆಂಕಟೇಶ್ ಅವರಿಗೆ ಐದು ಮತಗಳು ಪಡೆದುಕೊಂಡು ಪರಾಭವಗೊಂಡರೆ, ಎ. ಎನ್. ದೇವರಾಜ್ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಗಳು ಘೋಷಣೆ ಮಾಡಿದರು.

ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆಯನ್ನು ಘೋಷಣೆ ಮಾಡಿದ ಬಳಿಕ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಸಂತಸ ವ್ಯಕ್ತಪಡಿಸಿ ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ಕಾಂಗ್ರೆಸ್ ಪಕ್ಷದ ಬಾವುಟ ಹಿಡಿದು ವಿಜಯೋತ್ಸವವನ್ನು ಆಚರಿಸಿದರು. ಈ ಸಂದರ್ಭದಲ್ಲಿ ಹಾಪ್ ಕಾಮ್ಸ್ ಮಾಜಿ ಅಧ್ಯಕ್ಷ ಮುನೇಗೌಡ, ಭಕ್ತರಹಳ್ಳಿ ಕಾಂಗ್ರೆಸ್ ಯುವ ಮುಖಂಡ ಚಿದಾನಂದ ಮೂರ್ತಿ, ಮಧುಗೌಡ, ಮಾಜಿ ಅಧ್ಯಕ್ಷ ಕೋಟೆ ಚನ್ನೇಗೌಡ, ಬಿಕೆ ರಾಮಚಂದ್ರಪ್ಪ, ನಂಜುಂಡ ಆರಾಧ್ಯ ಮತ್ತಿತರರು ಉಪಸ್ಥಿತರಿದ್ದರು.

## ಗುಂಡಗುರ್ತಿ ಮೊರಾರ್ಜಿ ದೇಸಾಯಿ ಪ್ರಾಂಶುಪಾಲೆ ಶಿವಮ್ಮ ವಿರುದ್ಧ ಭ್ರಷ್ಟಾಚಾರದ ಆರೋಪ ಅಮಾನತ್ತು ಮಾಡಿ,ತನಿಖೆ ನಡೆಸುವಂತೆ AIBSP ಆಗ್ರಹ

❑ ನೈಜ್ಯ ದೆಸೆ ನ್ಯೂಸ್




**ಕಲಬುರಗಿ: ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ (AIBSP) ಕಲಬುರಗಿ ಜಿಲ್ಲಾ ಘಟಕದ ವತಿಯಿಂದ ಕಲ್ಯಾಣ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಅಧ್ಯಕ್ಷ ಸುನೀಲ ಇಂಗನಕಲ್ಲ ಅವರು ಚಿತ್ತಾಪೂರ ತಾಲೂಕಿನ ಗುಂಡಗುರ್ತಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಕಾಲೇಜಿನ (SC 927) ಪ್ರಾಂಶುಪಾಲೆ ಶಿವಮ್ಮ ಬಡಿಗೇರ ಅವರ ವಿರುದ್ಧ ಗಂಭೀರ ಭ್ರಷ್ಟಾಚಾರದ ಆರೋಪ ಹೊರಿಸಿದರು.**

ಸುನೀಲ ಇಂಗನಕಲ್ಲ ಅವರು ಮಾತನಾಡಿ, "ಕಾಲೇಜಿನ ಪ್ರಾಂಶುಪಾಲೆ ಶಿವಮ್ಮ ಬಡಿಗೇರ ಅವರು ಬಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಂದ ಅನಧಿಕೃತವಾಗಿ ಹಣ ಪಡೆದು ಪ್ರವೇಶ ನೀಡಿರುವುದು ದೃಢವಾಗಿದೆ. ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಂದ 19 ಮಂದಿಯಿಂದ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಂದ 12 ಮಂದಿಯಿಂದ ತಲಾ ?5,000 ರಿಂದ ?40,000 ವರೆಗೆ ಹಣ ವಸೂಲಿ ಮಾಡಲಾಗಿದೆ. ಒಟ್ಟು ಸುಮಾರು 13 ಲಕ್ಷ ರೂಪಾಯಿ ಸಂಗ್ರಹಿಸಿರುವುದು ಬಹಿರಂಗವಾಗಿದೆ," ಎಂದು ಆರೋಪಿಸಿದರು.

ಅವರು ಮುಂದುವರಿದು, "ಕಾಲೇಜಿನ ಇಬ್ಬರು ಡಿ–ದರ್ಜೆಯ ಕೆಲಸಗಾರರಿಗೆ ಶಾಶ್ವತ ನೇಮಕಾತಿ ನೀಡುವ ಭರವಸೆ ನೀಡಿ 16,000 ಪಡೆದಿದ್ದಾರೆ. ಜೊತೆಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಂದ ಅಂಕಪಟ್ಟಿ ನೀಡುವ ವೇಳೆ ತಲಾ 500 ವಸೂಲಿ ಮಾಡಿರುವುದೂ ದಾಖಲಾಗಿದೆ," ಎಂದರು. ಈ ಕುರಿತು ಅವರು ಸೆಪ್ಟೆಂಬರ್ 22 ರಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ನಿರ್ದೇಶಕರಿಗೆ ಲಿಖಿತ ದೂರು ಸಲ್ಲಿಸಿದ್ದು, ನಿರ್ದೇಶಕರು ಅಂದಿನ ದಿನವೇ ಸೇಡಂ ಉಪ ಆಯುಕ್ತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ಸ್ಥಳ ಪರಿಶೀಲನೆ ನಡೆಸಿ ಏಳು ದಿನಗಳೊಳಗೆ ವರದಿ ಸಲ್ಲಿಸಲು ಸೂಚನೆ ನೀಡಿದ್ದರು.

ಆದರೆ 50 ದಿನಗಳು ಕಳೆದರೂ ತನಿಖೆ ಆರಂಭವಾಗದಿರುವುದು ಖಂಡನೀಯ ಎಂದು ಸುನೀಲ ಇಂಗನಕಲ್ಲ ವಿಷಾದ ವ್ಯಕ್ತಪಡಿಸಿದರು. ಅವರು ಸರ್ಕಾರದ ಸಂಬಂಧಿತ ಅಧಿಕಾರಿಗಳಿಗೆ ತಕ್ಷಣದ ತನಿಖೆ ನಡೆಸಿ, ಪ್ರಾಂಶುಪಾಲೆ ಶಿವಮ್ಮ ಬಡಿಗೇರ ಅವರನ್ನು ಸೇವೆಯಿಂದ ಅಮಾನತ್ತು ಮಾಡಿ, ವಿದ್ಯಾರ್ಥಿಗಳಿಂದ ಪಡೆದ ಹಣವನ್ನು ಹಿಂತಿರುಗಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ರಾಜೇಂದ್ರ ದಂಡೋತಿ, ಶೋಭಾ ನಾಯಕ (ಜಿಲ್ಲಾ ಸಂಚಾಲಕರು), ಸನ್ನಿ ಲಿಯೋನ್ (ಉತ್ತರ ವಲಯ ಅಧ್ಯಕ್ಷರು), ಮಂಜುಳಾ ದೇವರುಮನೆ (ಉಪಾಧ್ಯಕ್ಷೆ), ಚಂದ್ರಶೇಖರ್ ಆಜಾದ್ (ಜಿಲ್ಲಾ ಮುಖಂಡರು), ಸಿದ್ಧಾರ್ಥ್ ಮಾಡಬುಳ (ಜಿಲ್ಲಾ ಮುಖಂಡರು), ಮಲ್ಲು ಸೇರಿದಂತೆ ಹಲವು ಜಿಲ್ಲಾ ಘಟಕದ ಮುಖಂಡರು ಉಪಸ್ಥಿತರಿದ್ದರು.

## ಸಾಧನೆಗೆ ಏಕಾಗ್ರತೆ ಹಾಗೂ ಕಠಿಣ ಪರಿಶ್ರಮ ಮುಖ್ಯ: ಎಸ್.ಐ ಜೋಗೂರ



❑ ನೈಜ್ಯ ದೆಸೆ ನ್ಯೂಸ್

**ಆಲಮೇಲ: ವಿಶ್ವೇಶ್ವರ ಬಾಲ ಭಾರತಿ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾಲೂಕು ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆ ಆಗಿರುವ ವಿದ್ಯಾರ್ಥಿಗಳಿಗೆ ಶಾಲೆಯ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.**


ಈ ವೇಳೆ ಸಂಸ್ಥೆಯ ಅಧ್ಯಕ್ಷರು ಎಸ್.ಐ. ಜೋಗುರ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಿ ಮಾತನಾಡುತ್ತಾ ವಿದ್ಯಾರ್ಥಿಗಳ ಸಾಧನೆಯು ಅಭಿನಂದನರ್ಹವಾಗಿದೆ ಅವರ ಕಠಿಣ ಪರಿಶ್ರಮ ಹಾಗೂ ನಿರಂತರ ಪ್ರಯತ್ನದ ಫಲವಾಗಿ ಉತ್ತಮ ಆಟ ಆಡಿ ಉತ್ತಮ ಕ್ರೀಡಾಪಟೂಗಳಾಗಿ ಹೊರ ಹೊಮ್ಮಿದ್ದಾರೆ. ಈ ವಿದ್ಯಾರ್ಥಿಗಳ ಏಕಾಗ್ರತೆ ಇವರ ಸಾಧನೆಯ ಮೂಲಮಂತ್ರ ಹಾಗಾಗಿ ಎಲ್ಲಾ ವಿದ್ಯಾರ್ಥಿಗಳು ಇವರ ಸಾಧನೆಯನ್ನು ಪ್ರೇರಣೆಯಾಗಿ ತೆಗೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ ಆದ ವಿದ್ಯಾರ್ಥಿಗಳಾದ ಸಾಕ್ಷಿ ಬಬಲೇಶ್ವರ ,ಅಭಿಷೇಕ ಕೊಬ್ರೆ,ಮಹಾದೇವ ಮಡಿವಾಳ ಹಾಗೂ ಕ್ರೀಡಾ ಮಾರ್ಗದರ್ಶನ ಮಾಡಿದ ದೈಹಿಕ ಶಿಕ್ಷಕಿಯರಾದ ಸೀತಾ ಆರೇಶಂಕರ ರವರನ್ನು ಸನ್ಮಾನಿಸಲಾಯಿತು .ಈ ವೇಳೆ ಸಂಸ್ಥೆಯ ಕೋಶಾಧ್ಯಕ್ಷರು ಅರವಿಂದ ಕುಲಕರ್ಣಿ ,ಮುಖ್ಯ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ, ಚಂದ್ರಕಾಂತ ದೇವರಮನಿ ಪ್ರಶಾಂತ ಗಡದೆ,ಲಕ್ಷ್ಮೀಬಾಯಿ ಹಳೇಮನಿ,ಸುವರ್ಣ ಸಾರಂಗಮಠ,ಸುನೀತಾ ಗುಂಡದ ,ವೀಣಾ ರಾಂಪೂರಮಠ, ಲಕ್ಷ್ಮೀ ಗುಣಾರಿ ಮುಂತಾದವರು ಉಪಸ್ಥಿತರಿದ್ದರು.

## ದೆಹಲಿಯಲ್ಲಿ ಬಾಂಬ್ ಸ್ಫೋಟಿಸಿದ್ದು ಉಮರ್: ಡಿಎನ್ಎ ಪರೀಕ್ಷೆಯಲ್ಲಿ ದೃಢ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಕೆಂಪು ಕೋಟೆ ಬಳಿ ಕಾರ್ ಬಾಂಬ್ ಸ್ಫೋಟ ಮಾಡಿದ್ದು ಡಾ. ಉಮರ್ ಎನ್ನುವುದು ಅಧಿಕೃತವಾಗಿ ದೃಢಪಟ್ಟಿದೆ. ಐ20 ಕಾರನ್ನು ಚಲಾಯಿಸಿದ ವ್ಯಕ್ತಿ ಉಮರ್ ಎಂದು ತನಿಖಾಧಿಕಾರಿಗಳು ಮೊದಲೇ ಶಂಕಿಸಿದ್ದರು.**



ಹೀಗಿದ್ದರೂ ಮುಂದೆ ಚಾರ್ಜ್‌ಶೀಟ್ ಸಲ್ಲಿಕೆ ಮಾಡುವಾಗ ಮೃತ ವ್ಯಕ್ತಿ ಉಮರ್ ಎನ್ನುವುದಕ್ಕೆ ವೈಜ್ಞಾನಿಕ ದಾಖಲೆಯ ಅಗತ್ಯ ಇತ್ತು. ಈ ಕಾರಣಕ್ಕೆ ಪುಲ್ವಾಮಾದಲ್ಲಿರುವ ಉಮರ್ ಕುಟುಂಬಸ್ಥರ ಡಿಎನ್ಎ ಸಂಗ್ರಹಿಸಲಾಗಿತ್ತು. ಸ್ಫೋಟದ ನಂತರ ಉಮರ್ ಕಾಲು ಸ್ಟೀರಿಂಗ್ ವೀಲ್ ಮತ್ತು ಆಕ್ಸಿಲರೇಟರ್ ನಡುವೆ ಸಿಲುಕಿಕೊಂಡಿತ್ತು. ಡಿಎನ್ಎ ಮಾದರಿ ಉಮರ್ ತಾಯಿಯ ಮಾದರಿಯೊಂದಿಗೆ ಹೊಂದಿಕೆಯಾಗಿದೆ ಎಂದು ದೆಹಲಿ ಪೊಲೀಸರ ಮೂಲಗಳು ತಿಳಿಸಿವೆ. ದೆಹಲಿ ಸ್ಫೋಟದ ಪ್ರಮುಖ ಶಂಕಿತ ಆರೋಪಿ ಉಮರ್ ನಬಿ ಶ್ರೀನಗರದಿಂದ ಒಃಃಖ ಮತ್ತು ಒಆ ಪದವಿಗಳನ್ನು ಪಡೆದು 2023ರಲ್ಲಿ ಕಾಶ್ಮೀರದ ಅನಂತ್‌ನಾಗ್‌ನಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ಎಸ್‌ಆರ್ ಆಗಿ ಕೆಲಸ ಮಾಡುತ್ತಿದ್ದ. ಆರಂಭದಿಂದಲೂ ಉಮರ್ ಕೆಲಸ ವಿಷಯದಲ್ಲಿ ಕೆಟ್ಟ ಉದ್ಯೋಗಿಯಾಗಿಯೇ ಕಾಣಿಸಿಕೊಂಡಿದ್ದ. ದಿನೇದಿನೇ ಒಂದಿಲ್ಲೊಂದು ದೂರುಗಳು ಬರುತ್ತಲೇ ಇದ್ದವು. ಸಹ ವೈದ್ಯರು, ಪ್ಯಾರಾಮೆಡಿಕಲ್ ಸಿಬ್ಬಂದಿ ಸೇರಿದಂತೆ ರೋಗಿಗಳು ಕೂಡ ಉಮರ್‌ನ ಅಸಭ್ಯ ಹಾಗೂ ಅಜಾಗರೂಕತೆ ಬಗ್ಗೆ ಆರೋಪಿಸುತ್ತಿದ್ದರು. ಅಲ್ಲದೇ ಉಮರ್ ಕೂಡ ಹೆಚ್ಚಿನ ಸಮಯ ಆಸ್ಪತ್ರೆಗೆ ಗೈರಾಗಿಯೇ ಇರುತ್ತಿದ್ದ.

## ಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ರೈತ ಆತ್ಮಹತ್ಯೆ

❑ ನೈಜ್ಯ ದೆಸೆ ನ್ಯೂಸ್



**ಬೆಳಗಾವಿ: ಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ರೈತ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಳಗಾವಿ ತಾಲೂಕಿನ ಕಡೋಲಿ ಗ್ರಾಮದಲ್ಲಿ ನಡೆದಿದೆ. ಸಾತೇರಿ ಹೊನ್ನಪ್ಪ ರುಟಕುಟೆ (78) ಮೃತ ದುರ್ದೈವಿಯಾಗಿದ್ದು, ಮಣ್ಣೂರ ಗ್ರಾಮದ ಕೋ ಆಪರೇಟಿವ್ ಫೈನಾನ್ಸ್ ಮೇಲೆ ಕಿರುಕುಳದ ಆರೋಪ ಕೇಳಿ ಬಂದಿದೆ.**

ರೈತ ಸಾತೇರಿ ಹೊನ್ನಪ್ಪ ರುಟಕುಟೆ ಫೈನಾನ್ಸ್ ನಲ್ಲಿ 12 ಲಕ್ಷ ರೂಪಾಯಿ ಸಾಲ ತೆಗೆದುಕೊಂಡಿದ್ದರು. ಆ ಪೈಕಿ 4 ಲಕ್ಷ ರೂ. ಮರುಪಾವತಿ ಮಾಡಿದ್ದರು. ಹೀಗಿದ್ದರೂ ಬಡ್ಡಿ ಮತ್ತು ಅಸಲು ಸೇರಿ ಮತ್ತೆ 16 ಲಕ್ಷ ಪಾವತಿಸುವಂತೆ ಫೈನಾನ್ಸ್ ಕಿರುಕುಳ ನೀಡಿದೆ. ಸಾಲ ತೀರಿಸದೆ ಇದ್ದರೆ ಮನೆ ಹರಾಜು ಹಾಕುವುದಾಗಿ ಬೆದರಿಕೆ ಹಾಕಿದ್ದಲ್ಲದೆ, ಫೈನಾನ್ಸ್ ಸಿಬ್ಬಂದಿ ಊರಿನಲ್ಲಿ ಡಂಗುರ ಸಾರಿದ್ದಾರೆ. ಹೀಗಾಗಿ ಮರ್ಯಾದೆ ಹೋಯಿತು ಎಂದು ಮನನೊಂದು ಸಾತೇರಿ ಹೊನ್ನಪ್ಪ ರುಟಕುಟೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಫೈನಾನ್ಸ್ ಸಿಬ್ಬಂದಿಯೇ ಸಾವಿಗೆ ಕಾರಣ ಎಂದು ಕುಟುಂಬಸ್ಥರು ಆರೋಪಿಸಿದ್ದು, ಈ ಬಗ್ಗೆ ಕಾಕತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದೆಹಲಿ ಸ್ಫೋಟ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಶಂಕಿತರ ವಿಚಾರಣೆ

❑ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ರಾಷ್ಟ್ರ ರಾಜಧಾನಿ ದೆಹಲಿ ಸ್ಫೋಟ ಪ್ರಕರಣದ ನಂತರ ದೇಶದೆಲ್ಲೆಡೆ ಹೈ ಅಲರ್ಟ್ ಘೋಷಿಸಲಾಗಿದ್ದು, ರಾಜ್ಯದಲ್ಲೂ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಹೀಗಾಗಿ ಈ ಹಿಂದೆ ಬಂಧಿಸಲಾಗಿದ್ದ ಇಬ್ಬರು ಶಂಕಿತ ಉಗ್ರರನ್ನು ಇಲ್ಲಿನ ಪೊಲೀಸರು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ.**

ಐದು ವರ್ಷಗಳ ಹಿಂದೆ ಬೆಂಗಳೂರಿನ ಸಂಜಯನಗರದಲ್ಲಿ ಬಂಧಿಸಲಾಗಿದ್ದ ವೈದ್ಯನಿಗೂ ದೆಹಲಿ ಕಾರ್ ಸ್ಫೋಟ ಪ್ರಕರಣಕ್ಕೂ ಸಂಬಂಧವಿದೆಯೇ ಎಂಬ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ನಗರದ ವೈದ್ಯನನ್ನು ದೇಶದ್ರೋಹಿ ಚಟುವಟಿಕೆಯಲ್ಲಿ ಭಾಗಿಯಾಗಿದ್ದಾರೆಂಬ ಆರೋಪದ ಮೇಲೆ ಈ ಹಿಂದೆ ಬಂಧಿಸಲಾಗಿತ್ತು. ಇದೀಗ ವೈಟ್ ಕಾಲರ್ ಉಗ್ರ ಚಟುವಟಿಕೆಗಳಲ್ಲಿ ಭಾಗಿಯಾಗಿರುವವರು ಬಹುತೇಕ ವೈದ್ಯರೇ ಆಗಿರುವುದರಿಂದ ಈ ಹಿಂದೆ ಬಂಧಿಸಲಾಗಿದ್ದ ವೈದ್ಯನು ಇದೇ ಗುಂಪಿಗೆ ಸೇರಿದವನಿರಬೇಕು ಎಂಬ ಅನುಮಾನ ಪೊಲೀಸರನ್ನು ಕಾಡತೊಡಗಿದೆ.

ಹೀಗಾಗಿ ಈ ಹಿಂದೆ ಬಂಧಿಸಲಾಗಿದ್ದ ವೈದ್ಯ ಎಲ್ಲಿದ್ದಾನೆ ಏನು ಮಾಡುತ್ತಿದ್ದಾನೆ ಎಂಬ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಅವನು ಪತ್ತೆಯಾದರೆ ಆತನನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.ಹೀಗಾಗಿ ಆತ ಇರುವಿಕೆ ಪತ್ತೆ ಹಚ್ಚುವ ಕಾರ್ಯವನ್ನು ಪೊಲೀಸರು ಚುರುಕುಗೊಳಿಸಿದ್ದಾರೆ. ಅದೇ ರೀತಿ ಕರ್ನಾಟಕದ ತುಮಕೂರು ಜಿಲ್ಲೆಯಲ್ಲಿ ನೆಲೆಸಿರುವ ಮಾಜಿ ಉಗ್ರ ಮುಜಾಹಿದ್ದೀನ್ ಎಂಬಾತನನ್ನು ಪೊಲೀಸರು ವಿಚಾರಣೆ ನಡೆಸಿದ್ದಾರೆ . ಕಳೆದ 2016ರಲ್ಲಿ ಎನ್ಐಎ ಅಧಿಕಾರಿಗಳು ಬಂಧಿಸಲಾಗಿದ್ದ ಮುಜಾಹಿದ್ದಿನ್ ಎಂಬಾತನನ್ನು ಎಎಸ್‌ಪಿ ಪುರುಷೋತ್ತಮ ನೇತೃತ್ವದ ತಂಡ ತೀವ್ರ ವಿಚಾರಣೆ ನಡೆಸಿದೆ.

ಇದರ ನಡುವೆ ರಾಜ್ಯದಲ್ಲಿರುವ ಶಂಕಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸಿ ಅವರನ್ನು ವಿಚಾರಣೆಗೊಳಪಡಿಸಲು ರಾಜ್ಯದ ಪೊಲೀಸರು ತೀರ್ಮಾನಿಸಿದ್ದಾರೆ ಎಂದು ತಿಳಿದುಬಂದಿದೆ. ದೆಹಲಿಯ ಕೆಂಪು ಕೋಟೆ ಬಳಿ ಸಂಭವಿಸಿದ ಕಾರು ಸ್ಫೋಟಕ್ಕೂ ಕರ್ನಾಟಕಕ್ಕೂ ಸಂಬಂಧವಿದೆಯೇ ಎಂಬ ಬಗ್ಗೆ ಈಗಾಗಲೇ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ತನಿಖೆ ನಡೆಸುತ್ತಿದೆ.ದೆಹಲಿಯಲ್ಲಿ ಸಂಭವಿಸಿದ ಕಾರು ಸ್ಫೋಟಕ್ಕೆ ಸಂಬಂಧಿಸಿದಂತೆ ಎನ್ಐಎ ಈಗಾಗಲೇ ತನಿಖೆ ಚುರುಕುಗೊಳಿಸಿದ್ದು ವಿವಿಧ ಆಯಾಮಗಳಲ್ಲಿ ಮಾಹಿತಿಗಳನ್ನು ಕಲೆಹಾಕುತ್ತಿದೆ. ದೆಹಲಿ ಸ್ಫೋಟದ ರೂವಾರಿ ಎಂದು ಹೇಳಲಾಗಿರುವ ಉಮರ್ ಸಂಬಂಧಿಕರನ್ನು ಹಾಗೂ ಎನ್ಐಎ ವಶದಲ್ಲಿರುವ ಮೂವರನ್ನು ವಿಚಾರಣೆಗೆ ಒಳಪಡಿಸಿದಾಗ ಎನ್ಐಎ ಅಧಿಕಾರಿಗಳಿಗೆ ಕೆಲವು ಮಾಹಿತಿಗಳು ತಿಳಿದುಬಂದಿವೆ.ಈ ಮಾಹಿತಿ ಬೆನ್ನತ್ತಿರುವ ಎನ್ಐಎ ಅಧಿಕಾರಿಗಳ ತಂಡ ರಾಜ್ಯಕ್ಕೂ ಭೇಟಿ ನೀಡಿ ಅಗತ್ಯ ದಾಖಲೆ ಸಂಗ್ರಹಿಸಲು ಹಾಗೂ ಕೆಲವರನ್ನು ವಿಚಾರಣೆಗೊಳಪಡಿಸಲು ತೀರ್ಮಾನಿಸಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಈ ಸಂಜೆಗೆ ತಿಳಿಸಿದ್ದಾರೆ.